ಸಂಪುಟ : 8 ಸಂಚಿಕೆ : 188 ಪುಟ : 4 ಬೆಲೆ : 3.00 ಬುಧವಾರ ಆಗಸ್ಟ್ 30, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 188 Pages : 4 Price : 3.00 Wednesday August 30, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಗದಗ-ಬೆಟಗೇರಿ ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಆಗಸ್ಟ್ 30 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ**

ವಾರ್ಡ್ ನಂ. 29 ರಲ್ಲಿ ಸಾಯಿನಗರ , ವಾರ್ಡ್ ನಂ. 14ರಲ್ಲಿ ಹಣಗಿ ಜೀನ್ 2ಭಾಗಗಳು, ಟ್ಯಾಗೋರ್ ರೋಡ್ ಲೈನ್, ಜನತಾ ಗೋಡೌನ್, ಮಹೇಂದ್ರಕರ್ ಲೈನ್, ಕುರಡಗಿಯವರ ಲೈನ್, ವಾರ್ಡ್ ನಂ. 13ರಲ್ಲಿ ಹಾದಿಮನಿ ವಕೀಲರ ಲೈನ್, ಮಟ್ಟಿ ವಕೀಲರ ಲೈನ್, ಪೊಲೀಸ್ ಕ್ವಾರ್ಟರ್ಸ್ ಲೈನ್, ಶಾಂತಗೇರಿ ಹೋಟೆಲ್, ಸೋನಿಯವರ ಲೈನ್, ವಿಜಯ ಶೆಟ್ಟರ ಲೈನ್, ಕೆ.ಸಿ.ರಾಣಿ ರಸ್ತೆ, ವಕೀಲರ ಚಾಳ, ಪತ್ತೆಪೂರ ಲೈನ್, ಹೆಡ್ ಪೋಸ್ಟ್ ಲೈನ್,

ವಾರ್ಡ್ ನಂ. 16ರಲ್ಲಿ ಹೊಂಬಳನಾಕಾ, ಜನತಾ ಕಾಲೋನಿಯ ಕೆಲವು ಭಾಗಗಳು, ವಾರ್ಡ್ ನಂ. 7ರಲ್ಲಿ ಪಂಚಲಕ್ಷ್ಮಿ ಬಡಾವಣೆ, ಭಾಗ-1,2,3,4, ಶಿವಾಜಿನಗರ 4 ಭಾಗಗಳು. ವಾರ್ಡ್ ನಂ. 35ರಲ್ಲಿ ಸಿದ್ದು ಹಳ್ಳೂರ ಮನೆ ಲೈನ್, ಜೋಶಿಯವರ ಲೈನ್, ವಾರ್ಡ್ ನಂ. 21, 22 ವಿಜಯನಗರ ಶಾಲೆಯ ವಿವಿಧ ಭಾಗಗಳು.

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬ್ಯಾಂಕ್ ಅಧಿಕಾರಿ, ಸಿಬ್ಬಂದಿಗಳಿಗೆ ಸಚಿವ ಎಚ್.ಕೆ.ಪಾಟೀಲ ಸೂಚನೆ

## ರೈತರೊಂದಿಗೆ ಸೌಜನ್ಯದಿಂದ ವರ್ತಿಸಿ





**■ ವಿಜಯಸಾಕ್ಷಿ ಸುದ್ದಿ, ಗದಗ**

ಬ್ಯಾಂಕ್ ಅಧಿಕಾರಿ, ಸಿಬ್ಬಂದಿಗಳು ರೈತರು ಹಾಗೂ ಗ್ರಾಹಕರೊಂದಿಗೆ ಸೌಜನ್ಯದಿಂದ ವರ್ತಿಸಿ ಅವರ ಸಮಸ್ಯೆಗಳಿಗೆ ಸ್ಪಂಧಿಸುವಂತೆ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಲೀಡ್ ಬ್ಯಾಂಕ್ ಪದಾಧಿಕಾರಿಗಳು, ಹೆಸ್ಕಾಂ, ಕೃಷಿ ಇಲಾಖೆ ಹಾಗೂ ರೈತ ಮುಖಂಡರಗಳೊಂದಿಗೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಳೆ ಕೊರತೆಯಿಂದಾಗಿ ರೈತರ ಪರಿಸ್ಥಿತಿಯು ▸▸ 3ನೇ ಪುಟಕ್ಕೆ

> ಲಕ್ಷ್ಮೇಶ್ವರ ಭಾಗದ ರೈತರ ಪಂಪ್ ಸೆಟ್ ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆಯಲ್ಲಿ ಅಡಚಣೆಯಾಗುತ್ತಿದೆ ಎಂಬ ದೂರುಗಳಿಗೆ ಸಂಬಂಧಿಸಿದಂತೆ, ರೈತರ ಹಿತದೃಷ್ಟಿಯಿಂದ ಅವರಿಗೆ ಅನುಕೂಲವಾಗುವ ರೀತಿಯಲ್ಲಿ ತಮ್ಮ ಸಾಮರ್ಥ್ಯಕ್ಕನುಗುಣವಾಗಿ ವಿದ್ಯುತ್ ಪೂರೈಸಬೇಕು. ರೈತರ ಅಭಿಪ್ರಾಯಗಳನ್ನು ಅರಿತು ಅವರ ಸಮಸ್ಯೆಗಳನ್ನು ಪರಿಹರಿಸಬೇಕು. ಲಕ್ಷ್ಮೇಶ್ವರ ಭಾಗದ ರೈತರಿಗೆ ಪಾಳೆ ಪ್ರಕಾರ ಹಗಲು ಹಾಗೂ ರಾತ್ರಿ ವಿದ್ಯುತ್ ಪೂರೈಸಬೇಕು. ಈ ಕುರಿತು ನಿಯಮಿತವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಬೇಕು.
>
> **-ಎಚ್.ಕೆ.ಪಾಟೀಲ,** ಜಿಲ್ಲಾ ಉಸ್ತುವಾರಿ ಸಚಿವರು, ಗದಗ.

> ಬಾಗೇವಾಡಿ, ಬೆಳ್ಳಟ್ಟಿ ವಿದ್ಯುತ್ ಸರಬರಾಜು ಕೇಂದ್ರಗಳ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ ಮುಂದಿನ ಹದಿನೈದು ದಿನಗಳೊಳಗಾಗಿ ಬಾಗೇವಾಡಿ ಬೆಳ್ಳಟ್ಟಿ ವಿದ್ಯುತ್ ಸರಬರಾಜು ಕೇಂದ್ರಗಳಿಂದ ವಿದ್ಯುತ್ ಸರಬರಾಜು ಸರಾಗವಾಗಿ ಮಾಡಲಾಗುವದು. ಸಧ್ಯ ಮುಂಡರಗಿ ಹಾಗೂ ಲಕ್ಷ್ಮೇಶ್ವರ ವಿಭಾಗಗಳಲ್ಲಿ ನಿಯಮಿತವಾಗಿ ವಿದ್ಯುತ ಪೂರೈಕೆಗೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
>
> **-ಕಲ್ಯಾಣಶೆಟ್ಟರ್,** ಹೆಸ್ಕಾಂ ಕಾರ್ಯಪಾಲಕ ಅಭಿಯಂತರ.

## ಸಚಿವ ಎಚ್.ಕೆ.ಪಾಟೀಲರಿಂದ ನೂತನ ಶಾಲಾ ಕಟ್ಟಡಗಳ ಉದ್ಘಾಟನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಮಂಗಳವಾರದಂದು ಬೆಟಗೇರಿಯ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆ ನಂ.3 ಹಾಗೂ ಶಾಲೆ ನಂ.4 ರಲ್ಲಿ ವಿವೇಕ ಯೋಜನೆಯಡಿ ನಿರ್ಮಿಸಲ್ಪಟ್ಟ ನೂತನ ಶಾಲಾ ಕೊಠಡಿಗಳನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರು, ಎಸ್.ಡಿ.ಎಂ.ಸಿ. ಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ.ರಡ್ಡೇರ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ ಸೇರಿದಂತೆ ಗಣ್ಯರು, ಶಿಕ್ಷಕರು, ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ನಂದೀಶ್ವರ ಬಡಾವಣೆಯ ನೂತನ ಈಜುಕೊಳ ವೀಕ್ಷಿಸಿದ ಸಚಿವ ಎಚ್.ಕೆ ಪಾಟೀಲ

## 3ರಂದು ಸಚಿವ ಬಿ.ನಾಗೇಂದ್ರರಿಂದ ನೂತನ ಈಜುಕೊಳ ಲೋಕಾರ್ಪಣೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕಳಸಾಪುರ ರಸ್ತೆಯ ನಂದೀಶ್ವರ ನಗರದ ಒಳಾಂಗಣ ಕ್ರೀಡಾಂಗಣದ ಹತ್ತಿರ ನಿರ್ಮಿಸಲಾದ ಈಜುಕೊಳವನ್ನು ಸೆಪ್ಟೆಂಬರ್ 3 ರಂದು ಯುವಜನ ಸಬಲೀಕರಣ ಇಲಾಖೆ ಸಚಿವರಾದ ಬಿ.ನಾಗೇಂದ್ರ ಅವರು ಲೋಕಾರ್ಪಣೆಗೊಳಿಸಲಿದ್ದಾರೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಹೇಳಿದರು.

ಮಂಗಳವಾರ ನಂದೀಶ್ವರ ನಗರದ ಈಜುಕೊಳ ಕಾಮಗಾರಿ ವೀಕ್ಷಿಸಿ ಮಾಧ್ಯಮ ಪ್ರತಿನಿಧಿಗಳೊಂದಿಗೆ



ಮಾತನಾಡಿದ ಸಚಿವ ಎಚ್.ಕೆ ಪಾಟೀಲ, 1.68 ಕೋಟಿ ರೂ. ವೆಚ್ಚದಲ್ಲಿ ನಗರಸಭೆಯಿಂದ ಎಸ್‌ಎಫ್‌ಸಿ ಯೋಜನೆಯ ಎಸ್‌ಸಿಎಸ್‌ಟಿ ಅನುದಾನದಡಿ ಈಜುಕೊಳ ನಿರ್ಮಾಣಗೊಂಡಿದೆ. ಗದಗ ನಗರದಲ್ಲಿ ಈಗಾಗಲೇ 3 ಈಜುಕೊಳಗಳು ಸಾರ್ವಜನಿಕರಿಗೆ ಲಭ್ಯವಿದ್ದು, ಇದು 4 ನೆಯ ಈಜುಕೊಳವಾಗಿದೆ. ನಂದೀಶ್ವರ ನಗರದ ಸಾರ್ವಜನಿಕರಿಗೆ, ಯುವಜನತೆಗೆ ಈ ಈಜುಕೊಳ ಸಹಕಾರಿಯಾಗಿದೆ ಎಂದರು.

ಮುಂದಿನ ಒಂದು ತಿಂಗಳೊಳಗಾಗಿ ಇನ್ನೊಂದು ಈಜುಕೊಳ ಕಾಮಗಾರಿ ಪೂರ್ಣಗೊಳ್ಳಲಿದ್ದು, ಅದೂ ಸಹ ಸಾರ್ವಜನಿಕರಿಗೆ ಲಭ್ಯವಾಗಲಿದೆ. ಈ ಈಜುಕೊಳ ಸದ್ಬಳಕೆ ಮಾಡಿಕೊಂಡು ರಾಜ್ಯ, ರಾಷ್ಟ್ರ ಮಟ್ಟದ ಈಜು ಸ್ಪರ್ಧೆಯಲ್ಲಿ ಜಿಲ್ಲೆಯ ಯುವ ಸಮುದಾಯ ಹೆಸರು ಮಾಡಬೇಕು. ಈ ಮೂಲಕ ಜಿಲ್ಲೆಗೆ ಕೀರ್ತಿ ತರಬೇಕು ಎಂದರು.

ರಾಷ್ಟ್ರದಲ್ಲಿಯೇ ಅಚ್ಚರಿ ಮೂಡಿಸಿದಂತಹ, ಹೆಣ್ಣು ಮಕ್ಕಳು ಸಮಾಜದಲ್ಲಿ ಆರ್ಥಿಕ ಸ್ವಾವಲಂಭನೆ ತರುವಂತಹ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮೀ ಗ್ಯಾರಂಟಿ ಯೋಜನೆಗೆ ಆಗಸ್ಟ 30 ರಂದು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಮೈಸೂರಿನಲ್ಲಿ ಚಾಲನೆ ನೀಡಲಿದ್ದು, ಅದೇ ದಿನ ಗದಗ ನಗರದ ಪಂ.ಭೀಮಸೇನ್ ಜೋಶಿ ಜಿಲ್ಲಾ ರಂಗಮಂದಿರದಲ್ಲಿ ಗೃಹಲಕ್ಷ್ಮೀ ಗ್ಯಾರಂಟಿ ಯೋಜನೆಗೆ ಜಿಲ್ಲಾ ಮಟ್ಟದಲ್ಲಿ ಮಧ್ಯಾಹ್ನ 12 ಗಂಟೆಗೆ ಚಾಲನೆ ನೀಡಲಾಗುವದು ಎಂದರು.

ಸರ್ಕಾರದ ಮಹಾತ್ವಾಕಾಂಕ್ಷೆ ಗ್ಯಾರಂಟಿ ಯೋಜನೆ ಜಾರಿಯಿಂದಾಗಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು ಸ್ವಾಭಿಮಾನದ ಜೀವನ ನಡೆಸಲು ಮುನ್ನುಡಿ ದೊರಕಿದಂತಾಗುತ್ತದೆ. ಅಲ್ಲದೇ ಬಡಕುಟುಂಬಗಳ ಆರ್ಥಿಕ ಅಡಚಣೆ ನಿವಾರಣೆಗೆ ▸▸ 3ನೇ ಪುಟಕ್ಕೆ

## ಬಾಲಕಿಯರ ಬಾಲಮಂದಿರ ಕಟ್ಟಡ ಕಾಮಗಾರಿ ವೀಕ್ಷಿಸಿದ ಸಚಿವ ಎಚ್.ಕೆ.ಪಾಟೀಲ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಿ.ಎಸ್.ಪಾಟೀಲ ಬಡಾವಣೆಯಲ್ಲಿ ನಿರ್ಮಾಣ ವಾಗುತ್ತಿರುವ ಬಾಲಕಿಯರ ಬಾಲಮಂದಿರ ಕಟ್ಟಡ ಕಾಮಗಾರಿಯನ್ನು ಮಂಗಳವಾರ ದಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ವೀಕ್ಷಿಸಿದರು.



ನಂತರ ಮಾತನಾಡಿದ ಅವರು, ಸರ್ಕಾರವು ಅಪಾರ ಅನುದಾನವನ್ನು ನಾಡಿನ ಮಕ್ಕಳ ಭವಿಷ್ಯಕ್ಕಾಗಿ ನೀಡುತ್ತಿದೆ. ನೀಡಿದ ಅನುದಾನದಿಂದ ಉತ್ತಮ ಗುಣಮಟ್ಟದ ಕಟ್ಟಡ ನಿರ್ಮಾಣವಾಗಬೇಕು. ಈ ಕಟ್ಟಡದಲ್ಲಿ ಮಕ್ಕಳು ವಸತಿ ಸೌಲಭ್ಯ ಪಡೆದು ಶೈಕ್ಷಣಿಕವಾಗಿ ಪ್ರಗತಿ ಹೊಂದಲು ಸಹಾಯವಾಗಬೇಕು. ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲು ಅಧಿಕಾರಿವರ್ಗ ಶ್ರಮಿಸಬೇಕು ಎಂದರು. ಈ ವೇಳೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಗಂಗಾಧರ ಶಿರೋಳ, ಪ್ರಭು ಬುರಬುರೆ, ಸಿದ್ದು ಪಾಟೀಲ, ವಾಸಣ್ಣ ಕುರಡಗಿ ಸೇರಿದಂತೆ ಗಣ್ಯರು, ಅಧಿಕಾರಿಗಳು ಹಾಜರಿದ್ದರು.


## ಶ್ರೀ ನುಲಿಯ ಚಂದಯ್ಯನವರ ಜಯಂತಿ ನಾಳೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಆಗಸ್ಟ್ 31ರಂದು ಬೆ.11ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಶ್ರೀ ನುಲಿಯ ಚಂದಯ್ಯನವರ ಜಯಂತಿಯನ್ನು ಆಚರಿಸಲಾಗುವುದು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.



ಲಿಂಗದಾಳ ಸರಕಾರಿ ಪ್ರೌಢಶಾಲೆ ಶಿಕ್ಷಕರಾದ ಡಾ. ಶಾಂತಕುಮಾರ್ ಭಜಂತ್ರಿ ಅವರು ನುಲಿಯ ಚಂದಯ್ಯನವರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡಲಿದ್ದಾರೆ.

ಕೆ.ಕೆ.ಪಿ.ಪಿ.ಜಿ. ಸಂಗೀತ ಪಾಠಶಾಲೆಯ ಪಂಡಿತ ವೆಂಕಟೇಶ ಅಲ್ಕೋಡ್ ಅವರು ವಚನ ಸಂಗೀತ ಪ್ರಸ್ತುತಪಡಿಸಲಿದ್ದಾರೆ.

ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಇಂದು ಗೃಹಲಕ್ಷ್ಮೀ ಯೋಜನೆಗೆ ಚಾಲನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ ಹಾಗೂ ಗದಗ ಬೆಟಗೇರಿ ನಗರಸಭೆ ಇವರ ಸಹಯೋಗದಲ್ಲಿ ಗೃಹಲಕ್ಷ್ಮೀ ಯೋಜನೆಗೆ ಚಾಲನೆ ಕಾರ್ಯಕ್ರಮವು ನಗರದ ಪರಿಸರ ಲೇಔಟ್‌ನ ಭಾರತ ರತ್ನ ಪಂ.ಭೀಮಸೇನ ಜೋಶಿ ರಂಗಮಂದಿರದಲ್ಲಿ ಆಗಸ್ಟ್ 30 ರಂದು ಮಧ್ಯಾಹ್ನ 12 ಗಂಟೆಗೆ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ




ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.

ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪರಶುರಾಮ ಶೆಟ್ಟೆಪ್ಪನವರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್ , ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಮೇಶ ಸುಣಗಾರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಎನ್‌ಇಪಿ ರದ್ದುಪಡಿಸದಂತೆ ಸರಕಾರಕ್ಕೆ ಎಬಿವಿಪಿ ಮನವಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎನ್‌ಇಪಿ ರದ್ದು ಮಾಡುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಎಬಿವಿಪಿ ವಿರೋಧ ವ್ಯಕ್ತಪಡಿಸಿ, ಸರಕಾರ ಈ ನಿರ್ಧಾರವನ್ನು ಕೂಡಲೇ ಹಿಂಪಡೆಯಬೇಕೆಂದು ಆಗ್ರಹಿಸಿ ಪಟ್ಟಣದಲ್ಲಿ ಮಂಗಳವಾರ ತಹಸೀಲ್ದಾರರ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಎಬಿವಿಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಅಭಿಷೇಕ ದೊಡ್ಡಮನಿ ಮಾತನಾಡಿ, ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳ್ಳುತ್ತಿರುವ ಹಂತದಲ್ಲಿಯೇ ರದ್ದುಗೊಳಿಸಲು ಹೊರಟಿರುವ ರಾಜ್ಯ ಸರ್ಕಾರದ ನಿರ್ಧಾರ ಶಿಕ್ಷಣ ವಿರೋಧಿಯಾಗಿದೆ. ಈ ಕ್ರಮ ಪೂರ್ವಾಗ್ರಹ ಪೀಡಿತ, ರಾಜಕೀಯ ಪ್ರೇರಿತವಾಗಿದ್ದು, ರಾಜ್ಯದ ವಿದ್ಯಾರ್ಥಿಗಳ ಹಿತಕ್ಕೆ




ಮಾರಕವಾಗಿದೆ. ಎನ್‌ಇಪಿಯನ್ನು ಕೇಂದ್ರ ಸರ್ಕಾರ ಕೇವಲ ತನ್ನ ಮರ್ಜಿಯಂತೆ ರೂಪಿಸಿದ್ದಲ್ಲ, ದೇಶಾದ್ಯಂತ ಇರುವ ಶಿಕ್ಷಣ ತಜ್ಞರ, ಪರಿಣಿತರ, ವಿದ್ಯಾರ್ಥಿ ಸಂಘಟನೆಗಳು ಸೇರಿ ಎಲ್ಲಾ ಬಾಧ್ಯಸ್ಥರೊಂದಿಗೆ ಚರ್ಚೆ ನಡೆಸಿ ತಯಾರಿಸಿದ ಕರಡಿನ ಆಧಾರದಲ್ಲಿ ಈ ನೀತಿಯನ್ನು ರೂಪಿಸಲಾಗಿದೆ. ಅದಕ್ಕಾಗಿ ರಾಜ್ಯ ಸರ್ಕಾರವು ರಾಜಕೀಯ ಪ್ರೇರಿತ ಸಂಕುಚಿತತೆಗಳಿಗೆ ಒಳಗಾಗದೆ, ಶಿಕ್ಷಣವನ್ನು ರಾಜಕೀಯ ವಸ್ತುವಾಗಿಸದೆ, ಇದರಲ್ಲಿ ಏನಾದರೂ ಸಣ್ಣ-ಪುಟ್ಟ ದೋಷಗಳು ಕಂಡು ಬಂದಲ್ಲಿ ಅವುಗಳನ್ನು ▸▸ 3ನೇ ಪುಟಕ್ಕೆ

# ಶಿಕ್ಷಕರು ಅರ್ಜಿ ಹಾಕಿ 'ಉತ್ತಮ ಶಿಕ್ಷಕ 'ಪ್ರಶಸ್ತಿ ಪಡೆಯಬೇಕಾ?



ಶಿಕ್ಷಕರು ಅರ್ಜಿ ಹಾಕಿ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆಯಬೇಕಾ ಎಂಬ ವಿಷಯ ನನ್ನನ್ನು ಹಲವು ದಶಕಗಳಿಂದ ಕಾಡುತ್ತಿದೆ. ನಾಲ್ಕು ದಶಕಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ನಾನು ಇದ್ದರೂ ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಆಗಲಿಲ್ಲವೆಂಬ ಕೊರಗು ಸಹ ನನಗಿದೆ. ಈ ವಿಷಯವಾಗಿ ನಾನು ಶಿಕ್ಷಣ ಸಚಿವನಾಗಿದ್ದಾಗ ಸಾಕಷ್ಟು ಪ್ರಾಮಾಣಿಕ ಪ್ರಯತ್ನ ಮಡಿದ್ದರೂ ಅದು ಸಾಧ್ಯವಾಗಲಿಲ್ಲ.

ಶಿಕ್ಷಕರನ್ನು ಆಯ್ಕೆ ಮಾಡಲು ವಿಶ್ವವಿದ್ಯಾಲಯದ ನಿವೃತ್ತ ಕುಲಪತಿಗಳ ನೇತೃತ್ವದಲ್ಲಿ ತಜ್ಞರ ಸಮಿತಿ ರಚಿಸಿ ಆಯ್ಕೆ ಕುರಿತು ಮಾನದಂಡಗಳನ್ನು ರಚಿಸಲು ಟಿಪ್ಪಣಿ ಸಹ ಹೊರಡಿಸಿದ್ದನ್ನು ಇಲ್ಲಿ ನೆನಪಿಸಿಕೊಳ್ಳುತ್ತೇನೆ. ಆ ಕೆಲಸ ಪೂರ್ಣಗೊಳ್ಳದೇ ಇರುವುದು ನನ್ನನ್ನು ಇನ್ನೂ ಕಾಡುತ್ತಿದೆ. ಈಗಂತೂ ಪ್ರಸ್ತುತ ಪದ್ಧತಿಯಿಂದ ಸಾಕಷ್ಟು ಅವಾಂತರಗಳು, ಟೀಕೆ ಟಿಪ್ಪಣಿಗಳು, ಪ್ರಶಸ್ತಿಯ ಮೌಲ್ಯ, ಮಹತ್ವಗಳ ಕುರಿತು ಸಾಕಷ್ಟು ಚರ್ಚೆಯಾಗುತ್ತಿರುವುದು ಸಹ ವಿಷಾದದ ಸಂಗತಿ.

ಶಿಕ್ಷಕನೆಂದರೆ ಶಿವಸ್ವರೂಪಿ. ಗುರು ಎನ್ನುವ ಪದದಲ್ಲಿ ಗು-ಎಂದರೆ ಕತ್ತಲೆ, ಅಜ್ಞಾನ. ರು-ಎಂದರೆ ಕತ್ತಲೆ ಕಳೆದು ಅಜ್ಞಾನವನ್ನು ಹೊಡೆದೋಡಿಸಿ ವಿದ್ಯಾರ್ಥಿಯ ಬದುಕಿನಲ್ಲಿ ಬೆಳಕನ್ನು ಮೂಡಿಸುವವನೇ ಗುರು. ಗುರುವಾದವನಿಗೆ ಯಾವಾಗಲೂ ತನ್ನ ಶಿಷ್ಯನ ಉದ್ಧಾರದ ಚಿಂತೆ ಇದ್ದೇ ಇರುತ್ತದೆ. ಶಿಷ್ಯ ತನ್ನನ್ನೂ ಮೀರಿ ಬೆಳೆದಾಗಲೇ ಗುರುವಿಗೆ ಸಮಾಧಾನ ಮತ್ತು ಸಂತೋಷವಾಗುತ್ತದೆ.

ಇಂತಹ ಗುರುವಿಗೆ ಪ್ರತಿ ವರ್ಷದ ಶಿಕ್ಷಕ ದಿನಾಚರಣೆಯ ಹಿನ್ನೆಲೆಯಲ್ಲಿ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ರಾಷ್ಟ್ರ ಮಟ್ಟದಿಂದ ಹಿಡಿದು, ತಾಲೂಕಾ ಮಟ್ಟದವರೆಗೂ ನೀಡಿ ಗೌರವಿಸಲಾಗುತ್ತಿದೆ. ಆದರೆ ಪ್ರಶಸ್ತಿ ನೀಡುವ ಮಾನದಂಡಗಳ ಬಗ್ಗೆ ಯೋಚಿಸಬೇಕಿದೆ. ಏಕೆಂದರೆ, ತಾನೊಬ್ಬ ಉತ್ತಮ ಶಿಕ್ಷಕನೆಂದು ತಾನೇ ಅರ್ಜಿ ಹಾಕಿ ಪ್ರಶಸ್ತಿ ಪಡೆಯಬೇಕಾದ ಅನಿವಾರ್ಯತೆಯಿರುವುದು ಶಿಕ್ಷಣ ಕ್ಷೇತ್ರದಲ್ಲಿ ಹಲವು ದಿನಗಳಿಂದ ಇರುವುದು ಬಹಳಷ್ಟು ಬೇಸರದ ಸಂಗತಿಯಾಗಿದೆ. ಈ ಪದ್ಧತಿ ಇಂದು ಸಾಕಷ್ಟು ಚರ್ಚೆಗೆ ಕಾರಣವಾಗಿದೆ.

ಇಲ್ಲಿ ಒಂದು ಪ್ರಶ್ನೆ ಎದುರಾಗುತ್ತದೆ. ಉತ್ತಮ ಪ್ರಶಸ್ತಿ ಪಡೆದವರು ಮಾತ್ರ ಉತ್ತಮ ಶಿಕ್ಷಕರು ಉಳಿದವರಾರೂ ಉತ್ತಮ ಶಿಕ್ಷಕರಲ್ಲವೆ? ಅಂಥವರು ತಾವಾಯಿತು, ತಮ್ಮ ಕೆಲಸವಾಯಿತು ಎಂದು ಸುಮ್ಮನೆ ಇರುವ ಶಿಕ್ಷಕರೇ ಹೆಚ್ಚು. ಅವರು ಯಾವ ಅರ್ಜಿಯನ್ನೂ ಹಾಕುವ ಗೋಜಿಗೆ ಹೋಗುವುದಿಲ್ಲ. ಹಾಗೆಂದು ಅವರು ಉತ್ತಮರಲ್ಲವೇ ಎಂಬ ಪ್ರಶ್ನೆ ಸಹಜವಾಗಿ ಮೂಡುತ್ತದೆ.

ಪ್ರಶಸ್ತಿಗೆ ಅರ್ಜಿ ಹಾಕುವ ಮಾನದಂಡವನ್ನು ನಿರ್ಧರಿಸಿರುವ ಸರಕಾರ ಅದೆಷ್ಟು ಸಮರ್ಪಕವಾಗಿ ಅರ್ಜಿಗಳನ್ನು ವಿಲೇವಾರಿ ಮಾಡುತ್ತದೆ? ಅರ್ಜಿ ಹಾಕಿದ ಶಿಕ್ಷಕರ ಶಾಲೆಗೆ ಭೇಟಿ ನೀಡಿ ಅವರು ಅರ್ಹರೋ ಅಲ್ಲವೋ ಎಂಬುದನ್ನು ಗಮನಿಸಿದ್ದಾರಾ? ಅರ್ಜಿ ಬಂತು, ಮೇಲಿಂದ ದೂರವಾಣಿ ಕರೆ ಬಂತು ಎಂದು ಪ್ರಶಸ್ತಿ ನೀಡಿದ ಉದಾಹರಣೆಗಳನ್ನು ನಾವು ಸಾಕಷ್ಟು ಕಂಡಿದ್ದೇವೆ, ಕಾಣುತ್ತಿದ್ದೇವೆ. ಬಹಳಷ್ಟು ಸಾರೆ ಪ್ರಶಸ್ತಿಯ ಮಾನದಂಡವೇನು ಎಂದು ಯೋಚಿಸಿದರೆ, ಮಾನವೇ ದಂಡ ಎನ್ನುವ ಉತ್ತರ ಸಿಗುತ್ತದೆ.

ಶಿಕ್ಷಕರೆಂದರೆ ಸ್ವಾಭಿಮಾನಿಗಳು. ತಮ್ಮ ಗೌರವಕ್ಕೆ ಚ್ಯುತಿ ಬರುತ್ತದೆ ಎಂದರೆ ಅವರು ಯಾರ ಮುಂದೆಯೂ ಪ್ರಶಸ್ತಿಗಾಗಿ ಕೈಚಾಚುವವರಲ್ಲ. ಯಾಕೆಂದರೆ ಮಕ್ಕಳಲ್ಲಿ ಸ್ವಾಭಿಮಾನ, ಕೆಚ್ಚು ಮತ್ತು ಪ್ರಾಮಾಣಿಕತಯ ಗುಣಗಳನ್ನು ಕಲಿಸುವವರು ಶಿಕ್ಷಕರು. ಹೀಗಾಗಿ ಸರಕಾರ ಅರ್ಜಿ ಕರೆದ ಮಾತ್ರಕ್ಕೆ ಎಲ್ಲ ಶಿಕ್ಷಕರೂ ಅರ್ಜಿ ಹಾಕುತ್ತಾರೆ ಎಂಬುದನ್ನು ನಿರೀಕ್ಷಿಸುವುದು ತಪ್ಪು. ಅರ್ಜಿ ಹಾಕುವ ಸಮಯ ಬಂದಾಗ ನಮಗ್ಯಾಕೆ ಈ ಉಸಾಬರಿ ಎಂಬುದು ನಿಜಕ್ಕೂ ಉತ್ತಮ ಶಿಕ್ಷಕರ ಅನಿಸಿಕೆಯಾಗಿದೆ. ಆದ್ದರಿಂದಲೇ ಪ್ರಶಸ್ತಿಗಾಗಿ ಅರ್ಜಿ ಹಾಕುವವರ ಸಂಖ್ಯೆ ತೀರಾ ವಿರಳವಾಗಿದೆ.

ಶಿಕ್ಷಣ ಇಲಾಖೆ ಅರ್ಜಿಗಳನ್ನು ಆಹ್ವಾನಿಸಿ ಪ್ರಶಸ್ತಿ ನೀಡುವ ಕ್ರಮವನ್ನು ಕೈ ಬಿಡಬೇಕು. ಸೆಪ್ಟೆಂಬರ್ ತಿಂಗಳಿಗೆ ಎರಡು-ಮೂರು ತಿಂಗಳ ಮುಂಚೆ ಶಾಲೆಗಳಿಗೆ ಭೇಟಿ ನೀಡಿ ಅಲ್ಲಿ ಯಾರು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಾರೆ, ಶಾಲಾ ಮಕ್ಕಳೊಂದಿಗೆ ಅವರು ಹೇಗೆ ನಡೆದುಕೊಳ್ಳುತ್ತಾರೆ, ಅವರ ಚರಿತ್ರೆ, ಚಾರಿತ್ರ್ಯವೇನು? ವಿದ್ಯಾರ್ಥಿಗಳ ಪಾಲಕರೊಂದಿಗೆ ಅವರ ಸಂಬಂಧ ಹೇಗಿದೆ, ಸಮಾಜದಲ್ಲಿನ ಸಮುದಾಯದೊಂದಿಗೆ ಅವರ ಒಡನಾಟ ಹೇಗಿದೆ ಎಂಬಿತ್ಯಾದಿ ವಿಷಯಗಳ ಪಟ್ಟಿ ಮಾಡಿಕೊಂಡು ಸಮೀಕ್ಷೆ ಮಾಡಿ ತಾವೇ ಸ್ವತಃ ಗುರುತಿಸಿ ಪ್ರಶಸ್ತಿ ನೀಡಿದರೆ ಪ್ರಶಸ್ತಿಗೊಂದು ಗೌರವ ಸಿಗುತ್ತದೆ. ಘನತೆ ಬರುತ್ತದೆ ಎಂಬ ಭಾವನೆ ನನ್ನದು. ಈಗ ಯಾರಾದರೂ ನನಗೆ ಉತ್ತಮ ಶಿಕ್ಷಕ ಪ್ರಶಸ್ತಿ ಬಂದಿದೆ ಎಂದು ಹೇಳಿದರೆ ಅವರನ್ನು ಅನುಮಾನದಿಂದ ನೋಡುವಂತಾಗಿದೆ. ಇದಕ್ಕೆ ಅರ್ಹ ಶಿಕ್ಷಕರೂ ಹೊರತಾಗಿಲ್ಲ. ಎಂಬಿತ್ಯಾದಿ ಪ್ರಶ್ನೆಗಳನ್ನು ಕೇಳಿ ಪ್ರಶಸ್ತಿ ಪುರಸ್ಕೃತರಿಗೆ ಮುಜುಗುರವನ್ನುಂಟು ಮಾಡುವದನ್ನೂ ನಾವು ಕಂಡಿದ್ದೇವೆ. ಇವರು ಉತ್ತಮ ಪ್ರಶಸ್ತಿ ಪುರಸ್ಕೃತರಾದರೆ ಸಾಕೇ? ಮಕ್ಕಳಿಂದ ಉತ್ತಮ ಶಿಕ್ಷಕ ಎನ್ನಿಸಿಕೊಳ್ಳುವು ಯಾವಾಗ ಎಂಬ ಪ್ರಶ್ನೆಯೂ ಮೂಡುತ್ತದೆ.

ಕೆಲವು ಸಂದರ್ಭಗಳಲ್ಲಿ ದಂಪತಿಗಳಿಬ್ಬರೂ ಶಿಕ್ಷಕರಾಗಿದ್ದರೆ, ತನಗೂ, ತನ್ನ ಹೆಂಡತಿಗೂ ಒಂದೊಂದು ಪ್ರಶಸ್ತಿ ನೀಡಿ ಎಂದು ಅಧಿಕಾರಿ, ರಾಜಕಾರಣಿಗಳಿಗೆ ದುಂಬಾಲು ಬಿದ್ದವರಿಗೇನೂ ಕೊರತೆಯಿಲ್ಲ. ಅಂಥವರು ಅಧಿಕಾರಿಗಳ, ರಾಜಕಾರಣಿಗಳ ಮರ್ಜಿ ಪಡೆದುಕೊಂಡು ಪ್ರಶಸ್ತಿ ಪಡೆದ ಉದಾಹರಣೆಗಳು ಇತ್ತೀಚೆಗೆ ಹೆಚ್ಚಾಗುತ್ತಿದೆ ಎಂಬ ನೋವು ಸಹ ನನಗಿದೆ.



ಈಗಲಾದರೂ ಶಿಕ್ಷಣ ಇಲಾಖೆ ಅರ್ಜಿ ಹಾಕಿಸಿಕೊಂಡು ಪ್ರಶಸ್ತಿ ನೀಡುವ ಕ್ರಮವನ್ನು ಕೈ ಬಿಡಬೇಕು.

**– ಬಸವರಾಜ ಹೊರಟ್ಟಿ**
ವಿ ಪ ಸಭಾಪತಿಗಳು,
ಬೆಂಗಳೂರು.



ಲಕ್ಷ್ಮೇಶ್ವರ ತಾಲೂಕಿನ ಯಳವತ್ತಿ ಗ್ರಾಮದಲ್ಲಿ ಇತ್ತೀಚೆಗೆ ನಡೆದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ ಗೊಜನೂರಿನ ಸರ್ಕಾರಿ ಪ್ರಾಥಮಿಕ ಶಾಲೆ ವೀರಾಗ್ರಣಿ ಪ್ರಶಸ್ತಿ ಪಡೆದುಕೊಂಡಿದೆ. ಮೈಲಾರಪ್ಪ ಸಂಶಿ 600ಮೀ ಓಟ ಪ್ರಥಮ, ಹನಮಂತ ಮಾಳಮ್ಮನವರ ಚಕ್ರ ಎಸೆತ, ಥ್ರೋಬಾಲ್ ಪ್ರಥಮ, ಪಾರ್ವತಿ ಲೆಂಕೆಣ್ಣವರ 400ಮೀ, ಗುಂಡು ಎಸೆತ, ಚಕ್ರ ಎಸೆತ ಪ್ರಥಮ ಸ್ಥಾನ ಪಡೆದು ವೈಯಕ್ತಿಕ ವೀರಾಗ್ರಣಿ ತನ್ನದಾಗಿಸಿಕೊಂಡಿದ್ದಾಳೆ. ಅನುಷ್ಕಾ ಹರಿಜನ 600ಮೀ ಪ್ರಥಮ, ಎತ್ತರ ಜಿಗಿತ ತೃತೀಯ, ಲಕ್ಷ್ಮೀ ಯಳವತ್ತಿ 600ಮೀ ದ್ವಿತೀಯ, ವ್ಹಾಲಿಬಾಲ್ ಮತ್ತು ಥ್ರೋಬಾಲ್‌ದಲ್ಲಿ ಗುಂಪು ಆಟದಲ್ಲಿ ಪ್ರಥಮ ಸ್ಥಾನ ಪಡೆದಿದೆ.



ಚಂದಿರನ ಅಂಗಳದಲ್ಲಿ ಸಂಚರಿಸುತ್ತಿರುವ ಚಂದ್ರಯಾನ-3 ಯೋಜನೆಯ ಪ್ರಗ್ಯಾನ್ ರೋವರ್‌ನಲ್ಲಿರುವ ಲೇಸರ್-ಪ್ರೇರಿತ ಬ್ರೇಕ್‌ಡೌನ್ ಸ್ಪೆಕ್ಟ್ರೋಸ್ಕೋಪ್ ಉಪಕರಣವು 'ದಕ್ಷಿಣ ಧ್ರುವದ ಬಳಿ ಚಂದ್ರನ ಮೇಲ್ಮೈಯಲ್ಲಿ ಗಂಧಕದ ಉಪಸ್ಥಿತಿಯನ್ನು ಮೊದಲ ಬಾರಿಗೆ ಮಾಪನಗಳ ಮೂಲಕ ಖಚಿತಪಡಿಸಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ(ಇಸ್ರೋ) ಮಂಗಳವಾರ ತಿಳಿಸಿದೆ.

## ಕೇಂದ್ರ ಸಾಹಿತ್ಯ ಅಕಾಡೆಮಿಯ ವಿಚಾರ ಸಂಕಿರಣ



■ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಸಾಕ್ಷಿ ಸುದ್ದಿ, ಪುಸ್ತಕವು ನಾಡಿನ ಸಂಸ್ಕೃತಿಯ ಪ್ರತೀಕ. ಅನುಭವ ಜ್ಞಾನದ ಅಭಿವ್ಯಕ್ತಿ ರೂಪವಾದ ಪುಸ್ತಕ, ಸಂಸ್ಕೃತಿಯ ನಿರಂತರ ಪ್ರವಾಹಕ್ಕೆ ಸೇತುವೆಯಾಗಿದೆ ಎಂದು ಲೇಖಕ, ಗದಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ರಾಜೇಂದ್ರ ಗಡಾದ ಹೇಳಿದರು.

ನವದೆಹಲಿಯ ಕೇಂದ್ರ ಸಾಹಿತ್ಯ ಅಕಾಡೆಮಿಯು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಗದಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು ಹಾಗೂ ನಿರಂತರ ಪ್ರಕಾಶನ ಇವುಗಳ ಸಹಯೋಗದಲ್ಲಿ ಇಲ್ಲಿನ ಶ್ರೀ ಜಗದ್ಗುರು ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಏರ್ಪಡಿಸಿದ್ದ 'ಓದುಗ ಮತ್ತು ಪುಸ್ತಕ ಸಂಸ್ಕೃತಿ' ಎಂಬ ವಿಚಾರ ಸಂಕೀರಣದಲ್ಲಿ ಉಪನ್ಯಾಸ ನೀಡಿದರು.

ಜಿ.ಎಸ್ ಗೋನಾಳ 'ಸಾಹಿತ್ಯದ ಕಾಲಘಟ್ಟಗಳೊಂದಿಗೆ ಓದುಗ' ಎಂಬ ವಿಷಯ ಕುರಿತು ಉಪನ್ಯಾಸ ನೀಡಿದರು. 'ಯುವ ಸಮುದಾಯದಲ್ಲಿ ಪಠ್ಯೇತರ ಓದು' ವಿಷಯದ ಕುರಿತು ಲೇಖಕಿ ವಿಮಲಾ ಇನಾಮದಾರ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೆಪಿ ಬಿ.ಇಡಿ ಕಾಲೇಜಿನ ಪ್ರಾಚಾರ್ಯ ಡಾ. ಬಿ.ಬಿ ಹೊಳಗುಂದಿ ಮಾತನಾಡಿ, ಪುಸ್ತಕ ಜ್ಞಾನಾರ್ಜನೆಯ ಮೆಟ್ಟಿಲಾಗಿದ್ದು, ಕೊಂಡು ಓದುವ ಸಂಸ್ಕೃತಿ ಎಲ್ಲೆಡೆ ಮೂಡಿ ಬರಬೇಕಾಗಿದೆ ಎಂದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಿಚಾರ ಸಂಕಿರಣವನ್ನು ಉದ್ಘಾಟಿಸಿದರು. ಕೇಂದ್ರ ಸಾಹಿತ್ಯ ಅಕಾಡೆಮಿಯ ಕನ್ನಡ ಭಾಷಾ ಸಲಹಾ ಸಮಿತಿ ಸದಸ್ಯರಾದ ಚನ್ನಪ್ಪ ಅಂಗಡಿ ಮಾತನಾಡಿದರು. ಫಕೀರೇಶ ಹೊಂಬಳ ಪ್ರಾರ್ಥಿಸಿದರು. ಸಹಾಯಕ ಪ್ರಾಧ್ಯಾಪಕ ಡಾ. ಎಂ.ಎಚ್ ಬಸವರಾಜ ಸ್ವಾಗತಿಸಿದರು. ಭುಜಂಗ ಸ್ವಾಮಿ ಇನಾಮದಾರ, ವಿಜಯಲಕ್ಷ್ಮೀ ಹಿರೇಮಠ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಎ.ಎಸ್ ಮಕಾನದಾರ ವಂದಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ಕವಿಗಳಾದ ಆರ್.ಡಿ ಕಪ್ಪಲಿ, ಬಿ.ಎಸ್ ಹಿಂಡಿ, ಡಾ. ಅರವಟಗಿಮಠ, ಅ.ದ ಕಟ್ಟಿಮನಿ, ಬಸವರಾಜ ನೆಲಜೇರಿ, ಎಂ.ಎಸ್ ಮಕಾನದಾರ, ಶಕುಂತಲಾ ಸಿಂಧೂರ, ಶಿಲ್ಪಾ ಮ್ಯಾಗೇರಿ, ಎಸ್.ಎಸ್ ಸುರಗಿಮಠ, ಬಸವರಾಜ ವಾರಿ, ಶಿವಾನಂದ ಗಿಡ್ನಂದಿ, ಬಿ.ಎಸ್ ಹಿರೇಮಠ, ಡಿ.ಎಸ್ ಬಾಪುರೆ ಮುಂತಾದವರಿದ್ದರು.

## ಈರುಳ್ಳಿ ಮೇಲಿನ ರಫ್ತು ತೆರಿಗೆ ರದ್ದುಪಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ



ಕೇಂದ್ರ ಸರ್ಕಾರ ಈರುಳ್ಳಿ ರಫ್ತುದಾರರ ಮೇಲೆ ಶೇ.40 ತೆ-ರಿಗೆ ವಿಧಿಸಿರುವುದನ್ನು ಕರ್ನಾಟಕ ರಾಜ್ಯ ಈರುಳ್ಳಿ ಬೆಳೆಗಾರರ ಸಂಘ ಖಂಡಿಸುತ್ತದೆ. ಶೇ.40 ತೆರಿಗೆ ವಿಧಿಸಿದ್ದರಿಂದ ರಫ್ತುದಾರರು ಹೊರಗಿನಿಂದ ಈರುಳ್ಳಿಯನ್ನು ಖರೀದಿಸಲು ಬರುವುದಿಲ್ಲ. ಜೊತೆಗೆ ರಫ್ತುದಾರರು ತೆರಿಗೆಯನ್ನು ರೈತರ ಮೇಲೆ ಹಾಕುತ್ತಾರೆ. ಈರುಳ್ಳಿ ಬೆಳೆಯುವ ರೈತರ ಮೇಲೆ ಪರಿಣಾಮ ಬೀರುತ್ತಿದ್ದು, ಈ ಕೂಡಲೇ ಅದನ್ನು ರದ್ದುಪಡಿಸಬೇಕು. ಜೊತೆಗೆ ಅತಿ ಹೆಚ್ಚು ಈರುಳ್ಳಿ ಬೆಳೆಯುವ ಜಿಲ್ಲೆಗಳಲ್ಲಿ ಒಂದಾದ ಗದಗ ಜಿಲ್ಲೆಯಲ್ಲಿ ಈರುಳ್ಳಿ ಸಂಗ್ರಹ ಘಟಕಗಳನ್ನು ಸ್ಥಾಪಿಸಬೇಕು. ಸರ್ಕಾರದಿಂದ ಈರುಳ್ಳಿ ಖರೀದಿ ಕೇಂದ್ರ ತೆರೆಯಬೇಕು ಎಂದು ರಾಜ್ಯ ಈರುಳ್ಳಿ ಬೆಳೆಗಾರರ ಸಂಘದವರು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಂಘದ ಅಧ್ಯಕ್ಷ ಸಿದ್ದೇಶ್ ಎನ್.ಎಂ, ಹಾನಿಗೊಳಗಾದ ಬೆಳೆಗಾರರಿಗೆ ಎಕರೆಗೆ 30 ಸಾವಿರ ರೂ. ಪರಿಹಾರ ನೀಡಬೇಕು. ರೈತರ ಸಾಲ ಸಂಪೂರ್ಣ ಮನ್ನಾ ಮಾಡಬೇಕು. ಅವೈಜ್ಞನಿಕವಾಗಿ ಸರ್ವೆ ಮಾಡಿ ರೈತರಿಗೆ ಮೋಸ ಮಾಡುವುದನ್ನು ಸರ್ಕಾರ ಕೈ ಬಿಡಬೇಕೆಂದರು.

ಈ ಸಂದರ್ಭದಲ್ಲಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ್ ಅಲಿಗೇರಿ, ಗದಗ ಜಿಲ್ಲಾಧ್ಯಕ್ಷ ಮಂಜಣ್ಣ ಮ್ಯಾಗೇರಿ, ಕಾರ್ಯಕಾರಿಣಿ ಮಂಡಳಿಯ ಅಧ್ಯಕ್ಷ ಶರಣಪ್ಪ ಮ್ಯಾಗೇರಿ, ಬಸವರಾಜ ಹಡಪದ, ತಿಪ್ಪಣ್ಣ ತಲ್ಲೂರು, ಇರ್ಷಾದ ಮಾನ್ವಿ ಸೇರಿದಂತೆ ಹಲವಾರು ರೈತರು, ರೈತ ಮುಖಂಡರು ಉಪಸ್ಥಿತರಿದ್ದರು.

## ವೆಂಗುರ್ಲಾ- 4 ಗೋಡಂಬಿ ಬೆಳೆಗೆ ಸಹಾಯಧನ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲೆಯ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳು, ಅರೆಮಲೆನಾಡು ಪ್ರದೇಶದಿಂದ ಕೂಡಿದ್ದು, ಈ ಪ್ರದೇಶಕ್ಕೆ ಅತಿ ಸೂಕ್ತವಾದ ಅಧಿಕ ಇಳುವರಿ, ಹೆಚ್ಚಿನ ಆದಾಯ ನೀಡುವ ಗೋಡಂಬಿ ತಳಿ ವೆಂಗುರ್ಲಾ-4 ಆಗಿದ್ದು, ರೈತರ ಆರ್ಥಿಕ ಸುಧಾರಣೆಗೆ ಸಹಾಯಕವಾಗಲಿವೆ. ಗೋಡಂಬಿ ತಳಿ ವೆಂಗುರ್ಲಾ-4, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳಿಗೆ ಅತಿ ಸೂಕ್ತವಾಗಿದ್ದು, ಕೆಂಪು ಮಣ್ಣಿನಿಂದ ಕೂಡಿದ ಭೂಮಿ ಇದಕ್ಕೆ ಸೂಕ್ತವಾಗಿದ್ದು, ಅತಿ ಹೆಚ್ಚಿನ ಪ್ರದೇಶ ವಿಸ್ತರಣೆ ಮಾಡಲು ಅವಕಾಶ ಮತ್ತು ಅನುಕೂಲತೆಗಳಿವೆ.

ಈಗಾಗಲೇ ಸಾಕಷ್ಟು ರೈತರು ಈ ಬೆಳೆಯನ್ನು ಮಾಡಿದ್ದು, ಅಧಿಕ ಇಳುವರಿ ಹೆಚ್ಚಿನ ಆದಾಯ ಪಡೆಯುತ್ತಿದ್ದಾರೆ. ಪ್ರಸಕ್ತ ಸಾಲಿಗೆ, ರೈತರಿಗೆ ಗೋಡಂಬಿ ಬೆಳೆ ಬೆಳೆಯಲು ಕೊಚ್ಚಿಯ ಗೇರು ಹಾಗೂ ಕೊಕೋ ನಿರ್ದೇಶನಾಲಯದ ಪ್ರಯೋಜಕತ್ವದಲ್ಲಿ ಉಚಿತ ಕಸಿಗಿಡಗಳು ಹಾಗೂ ನಿರ್ವಹಣೆಗಾಗಿ ಸಹಾಯಧನ ನೀಡಲಾಗುತ್ತದೆ. ಉಚಿತ ಸಸಿ ಹಾಗೂ ಸಹಾಯಧನ ಪಡೆಯಲು ಇಚ್ಚಿಸುವ ರೈತರು ನಿಗದಿತ ನಮೂನೆಯಲ್ಲಿ ಅರ್ಜಿ ತುಂಬಿ, ಪಹಣಿ ಪತ್ರ, ಬ್ಯಾಂಕ್ ಪಾಸ್ ಪುಸ್ತಕ, ಆಧಾರ ಕಾರ್ಡ್, ಫೋಟೋ ಹಾಗೂ ಮಣ್ಣು ಮತ್ತು ನೀರಿನ ಪರೀಕ್ಷಾ ವರದಿಯೊಂದಿಗೆ ತೋಟಗಾರಿಕೆ ಕಚೇರಿಗೆ ಸೆಪ್ಟೆಂಬರ್ 7 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಗದಗ ತಾಲೂಕಿನ ಹುಲಕೋಟಿಯಲ್ಲಿ ಗೋಡಂಬಿ ಸಂಸ್ಕರಣಾ ಘಟಕ ಪ್ರಾರಂಭವಾಗುತ್ತಿದ್ದು, ಅತಿ ಹೆಚ್ಚಿನ ಗೋಡಂಬಿಯ ಅವಶ್ಯಕತೆ ಇದ್ದು, ಅಧಿಕ ಲಾಭ ಪಡೆಯಲು ಅನುಕೂಲವಾಗುತ್ತದೆ. ಇದರ ಸದುಪಯೋಗ ಪಡೆದುಕೊಳ್ಳಲು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಸುರೇಶ ವೀ ಕುಂಬಾರ ಅವರು ರೈತರಲ್ಲಿ ಮನವಿ ಮಾಡಿದ್ದಾರೆ.

## ನೂತನ ಈಶ್ವರ, ಗಣೇಶ ಮೂರ್ತಿ ಪ್ರತಿಷ್ಠಾಪನೆ

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿಯ ತಿಮ್ಮಾಪೂರ ಗ್ರಾಮದ ಶ್ರೀ ಚೌಕಿಬಸವೇಶ್ವರ ದೇವಸ್ಥಾನದಲ್ಲಿ ನೂತನವಾಗಿ ಈಶ್ವರ ಹಾಗೂ ಗಣೇಶ ಮೂರ್ತಿ ಪ್ರತಿಷ್ಠಾಪನೆ ನೆರವೇರಿತು.

ಲಕ್ಕುಂಡಿ ಗ್ರಾಮದಿಂದ ಈಶ್ವರ, ಗಣೇಶ ಮೂರ್ತಿಗಳನ್ನು ಮಂಗಳ ವಾದ್ಯಗಳ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಸಂಚರಿಸಿ, ಶ್ರೀ ಚೌಕಿಬಸವೇಶ್ವರ ದೇವಸ್ಥಾನದಲ್ಲಿ ಪಂಚ ನದಿಗಳಿಂದ ತಂದ ಗಂಗಾ ಜಲದಲ್ಲಿ ಜಲಾಭಿಷೇಕ ಮಾಡಲಾಯಿತು. ಬೆಳಿಗ್ಗೆ 5.30ಕ್ಕೆ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಪಂಚಾಮೃತ ಅಭಿಷೇಕ ರುದ್ರಾಭಿಷೇಕ ಮತ್ತು ಹೋಮ-ಹವನಗಳನ್ನು ವಿಧಿಯುಕ್ತವಾಗಿ ನೆರವೇರಿಸಲಾಯಿತು. ಮೈನಹಳ್ಳಿ ಗ್ರಾಮದ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳು ಮೂರ್ತಿಗಳಿಗೆ ಜೀವ ಕಳೆಯನ್ನು ತುಂಬಿದರು.

ಕಾರ್ಯಕ್ರಮದಲ್ಲಿ ಗದುಗಿನ ಪಂಚಾಕ್ಷರಿ ಗವಾಯಿಗಳ ಆಶ್ರಮದ ಶ್ರೀ ಕಲ್ಲಯ್ಯಜ್ಜ ಸ್ವಾಮೀಜಿ, ಹರ್ಲಾಪೂರ ಗ್ರಾಮದ ಶ್ರೀ ಕೊಟ್ಟೂರೇಶ್ವರ ಸ್ವಾಮೀಜಿ, ಮೈನಹಳ್ಳಿ ಗ್ರಾಮದ ಸಿದ್ದೇಶ್ವರ ಸ್ವಾಮೀಜಿ, ಕೊಪ್ಪಳ ಕೆಂಡದ ಸ್ವಾಮೀಜಿ, ಕಲ್ಲೂರು ಗ್ರಾಮದ ವೀರಯ್ಯ ಹಿರೇಮಠ ಸ್ವಾಮೀಜಿಗಳು ಭಕ್ತಾದಿಗಳಿಗೆ ಆಶೀರ್ವಚನ ನೀಡಿದರು.

## ಪಿಎಸ್‌ಐ ರಿತ್ತಿ ಸೂಚನೆಯ ಮೇರೆಗೆ ರಸ್ತೆ ತಡೆ ಹಿಂದಕ್ಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ




ತಾಲೂಕಿನ ಮಾಗಡಿ ಗ್ರಾಮದಲ್ಲಿ ಭಾರತೀಯ ಕಿಸಾನ್ ಸಂಘದ ತಾಲೂಕಾ ಘಟಕದ ವತಿಯಿಂದ ಸೋಮವಾರ ರೈತರ ಸಮಸ್ಯೆಗಳ ಕುರಿತು ಆಯೋಜಿಸಲಾಗಿದ್ದ ರಾಜ್ಯ ಹೆದ್ದಾರಿ ತಡೆ ಪ್ರತಿಭಟನೆಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಪಿಎಸ್‌ಐ ಈರಣ್ಣ ರಿತ್ತಿ ಸ್ಥಳಕ್ಕೆ ಆಗಮಿಸಿ ಪ್ರತಿಭಟನಾಕಾರರ ಮನವೊಲಿಸಿ ಅವರಿಂದ ಮನವಿ ಸ್ವೀಕರಿಸುವ ಮೂಲಕ ಸುಗಮ ಸಂಚಾರಕ್ಕೆ ಅವಕಾಶವನ್ನು ಕಲ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಕಾರ್ಯದರ್ಶಿ ರಮೇಶ ಕೋಳಿವಾಡ, ಮಾಗಡಿ ಗ್ರಾಮದಲ್ಲಿ ರೈತ ಸಂಪರ್ಕ ರಸ್ತೆಗಳು ಹಾಳಾಗಿದ್ದು, ಓವರ್‌ಲೋಡ್‌ನಿಂದ ಟಿಪ್ಪರ್‌ಗಳು ರಾಜಾರೋಷವಾಗಿ ಸಂಚರಿಸುತ್ತಿವೆ. ಇದರಿಂದ ರೈತರು ಜಮೀನುಗಳಿಗೆ ತೆರಳಲು ಹರಸಾಹಸ ಪಡಬೇಕಾದ ಸ್ಥಿತಿಯ ಬಗ್ಗೆ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದರೂ ಸಹ ಯಾವುದೇ ಪ್ರಯೋಜನವಾಗಿಲ್ಲ. ಹೀಗಾಗಿ, ಇಂದು ರಾಜ್ಯ ಹೆದ್ದಾರಿ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಲು ಉದ್ದೇಶಿಸಲಾಗಿತ್ತು. ಆದರೆ ಪೊಲೀಸ್ ಇಲಾಖೆಯ ಸೂಚನೆಯ ಮೇರೆಗೆ ಪ್ರತಿಭಟನೆಯನ್ನು ಹಿಂಪಡೆಯಲಾಗಿದೆ ಎಂದರು.

ರೈತರ ಪ್ರತಿಭಟನೆಯಾಗಿದ್ದರಿಂದ ಸಹಜವಾಗಿಯೇ ಪೊಲೀಸ್ ಇಲಾಖೆ ವತಿಯಿಂದ ಪಿಎಸ್‌ಐ ಈರಣ್ಣ ರಿತ್ತಿ, ಅಪರಾಧ ವಿಭಾಗದ ಪಿಎಸ್‌ಐ ವಿಜಯಕುಮಾರ ತಳವಾರ ನೇತೃತ್ವದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಆದರೆ, ಪ್ರತಿಭಟನಾಕಾರರಿಗಿಂತ ನಿಯೋಜನೆಗೊಂಡ ಪೊಲೀಸರ ಸಂಖ್ಯೆಯೇ ಹೆಚ್ಚಾಗಿತ್ತು. ರಸ್ತೆ ತಡೆಗೆ ಪ್ರತಿಭಟನಾಕಾರರು ಮುಂದಾದರೂ ಸಹ ಪೊಲೀಸರು ಇದಕ್ಕೆ ಅವಕಾಶವನ್ನು ಕಲ್ಪಿಸಲಿಲ್ಲ.

ಈಶ್ವರಪ್ಪ ಮಲ್ಲಿಗವಾಡ, ಉಳಿವೆಪ್ಪ ಕುಂಡಿ, ಉಡಚಪ್ಪ ಪೂಜಾರ, ಮಹಾದೇವಪ್ಪ ಗದಗ, ಪರ್ವತಗೌಡ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

### ಆರ್ಘೂದ ಬ್ಯಾಂಕ್‌ನ ವಾರ್ಷಿಕ ಸಭೆ: ಶೇ.13 ಡಿವ್ಹಿಡೆಂಡ್ ಘೋಷಣೆ

# ಆರ್ಘೂದ್ ಬ್ಯಾಂಕ್‌ಗೆ ಜನಮನ್ನಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ.ಆರ್ಘೂದ ಕೋ-ಆ ಬ್ಯಾಂಕ್ ಲಿ. ಬ್ಯಾಂಕ್ ಸಭಾಂಗಣದಲ್ಲಿ ಬ್ಯಾಂಕ್‌ನ 62ನೇ ವಾರ್ಷಿಕ ಸಾಧಾರಣಾ ಸಭೆ ರವಿವಾರ ನಡೆಯಿತು. ಬ್ಯಾಂಕ್‌ಗೆ 5599 ಜನ ಸದಸ್ಯರಿದ್ದು, 282.77 ಲಕ್ಷ ರೂ. ಶೇರು ಬಂಡವಾಳ, 7325.84 ಲಕ್ಷ ರೂ.ಠೇವು ಹೊಂದಿದೆ. ಠೇವುಗಳ ಮೇಲೆ ವಿಮಾ ನಿಗಮದ ವಿಮಾ ಭದ್ರತೆ ಇದೆ. ದುಡಿಯುವ ಬಂಡವಾಳ 62787.81 ಲಕ್ಷ ರೂ.ದುಡಿಯುವ ಬಂಡವಾಳ ಆಗಿದೆ. ಬ್ಯಾಂಕ್ ಪ್ರಸಕ್ತ ಸಾಲಿನಲ್ಲಿ 111.36 ಲಕ್ಷ ರೂ. ಲಾಭಗಳಿಸಿದ್ದು ಶೇರುದಾರರಿಗೆ ಶೇ.13ರಷ್ಟು ಡಿವ್ಹಿಡೆಂಡ್ ನೀಡಲಿದೆ ಎಂದು ಬ್ಯಾಂಕ್‌ನ ಚೇರಮನ್ ಹಾಜಿ ಸರಫರಾಜಅಹ್ಮದ್ ಎಸ್. ಉಮಚಗಿ ಹೇಳಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗಣ್ಯ ವ್ಯಾಪಾರಸ್ಥರಾದ ಸಿದ್ಧರಾಮಯ್ಯ ಸಂಶಿಮಠ ಅವರು ಮಾತನಾಡಿದರು. ಮ್ಯಾನೇಜಿಂಗ್ ಡೈರೆಕ್ಟರ್ ಎ.ಜಿ ಯರಗುಡಿ ಸ್ವಾಗತಿಸಿ, ಸಭೆಯ ವಿಷಯ ಮಂಡಿಸಿದರು. ಶಾಖಾ ವ್ಯವಸ್ಥಾಪಕ ಆರ್.ಎಂ ನದಾಫ ಲೆಕ್ಕಪರಿಶೋಧನಾ ವರದಿ ಪ್ರಸ್ತುತಪಡಿಸಿದರು. ಬ್ಯಾಂಕ್‌ನ ಉಪಾಧ್ಯಕ್ಷ ಎಚ್.ಆರ್ ಬಳ್ಳಾರಿ ಅವರು ನಿವ್ವಳ ಲಾಭ ಹಂಚಿಕೆ ವಿವರಣೆ ನೀಡಿದರು. ಪ್ರಧಾನ ಕಚೇರಿಯ ವ್ಯವಸ್ಥಾಪಕ ಯಾಸೀನ ಹುಬ್ಬಳ್ಳಿ ವಾರ್ಷಿಕ ಬಜೆಟ್ ಮಂಡಿಸಿದರು.

ಎನ್.ಬಿ ಶಾಸ್ತ್ರೀ, ಸಿದ್ದಲಿಂಗಪ್ಪ ಚಳಗೇರಿ, ಬೇಲೇರಿ ಮಾತನಾಡಿದರು. ಬ್ಯಾಂಕ್‌ನ ಶಾಖಾ ವ್ಯವಸ್ಥಾಪಕರಾಗಿದ್ದ ಎಚ್.ಜಿ ಹರ್ಲಾಪೂರ, ಅಬ್ದುಲ್‌ಗನಿಸಾಬ ಹಣಗಿ ಅವರ ನಿಧನಕ್ಕೆ ಸಂತಾಪ ಸಲ್ಲಿಸಲಾಯಿತು. ಸಮಾರಂಭದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಅಂಜುಮಾ ಬಶೀರ ಅಹ್ಮದ ಹೀರೆಹಾಳ, ಸುಮಯ್ಯಾ ಮುಸ್ತಾಕ ಅಹ್ಮದ ಚಿತ್ರಗಾರ, ಅಬ್ದುಲಖಯುಮ್ ಅಖ್ತರ ಹುಸೇನ ಮುಲ್ಲಾ, ಸಫೀನಾ ಡಾ.ವೈ.ಆರ್ ಬೇಲೇರಿ, ಸಾನಿಯಾ ಮುಸ್ತಾಕ, ಅಹ್ಮದ ಚಿತ್ರಗಾರ, ಶಾನು ಆರ್ ಮುಲ್ಲಾ, ಸಾನಿಯಾ ಕಣಕ್ಯಾನವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ವೇದಿಕೆಯ ಮೇಲೆ ನಿರ್ದೇಶಕರಾದ ಎಂ.ಎಂ ಶೇಖ, ಆರ್.ಎಲ್ ಬಾಗಲಕೋಟ, ಎಂ.ಎ ಹಣಗಿ, ಶಾನವಾಜ ಉಮಚಗಿ, ಬಿ.ಎಸ್ ಢಾಲಾಯತ, ಕೌಶಲ್ಯಬಾಯಿ ಕಲಾಲ, ಗುಲಜಾರಬಾನು ಮುಜಾವರ, ವೈ.ಎಸ್ ತೋಟದ, ಈಶ್ವರಪ್ಪ ಪಾತ್ರೋಟ, ಡಿ.ಜಿ ರೆಹಮಾನವರ, ಎಚ್.ಎನ್ ಇಟಗಿ ಉಪಸ್ಥಿತರಿದ್ದರು. ಮೌಲಾನಾ ಖಿರಾನ ಪಠಿಸಿದರು, ಪ್ರಾಚಾರ್ಯ ಎಂ.ಎಂ ಶಿರಹಟ್ಟಿ ಪರಿಚಯಿಸಿ ನಿರೂಪಿಸಿದರು. ಯಾಸಿನ್ ಹುಬ್ಬಳ್ಳಿ ವಂದಿಸಿದರು.



ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ ಗೊಜನೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ತಂಡ ಉತ್ತಮ ಪ್ರದರ್ಶನ ಮೂಲಕ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಬಾಲಕರ ಖೋ ಖೋ, 400 ಮೀ ರೀಲೆ, ಬಾಲಕಿಯರ ಖೋ ಖೋ ಮತ್ತು 400ಮೀ ರೀಲೆ ಪ್ರಥಮ, ಉದ್ದಜಿಗಿತ, ಓಟ, ಗುಂಡು/ಚಕ್ರ ಎಸೆತ ಸೇರಿ ವೈಯಕ್ತಿಕ ಆಟದಲ್ಲಿ ಮಾಬುಸಾಬ ಪಿಂಜಾರ ವೈಯಕ್ತಿಕ ವೀರಾಗ್ರಣಿ ಪಡೆದರೆ, ರಾಧಾ ಗಾಂಜಿ, ವೈಷ್ಣವಿ ಹೆಬ್ಬಳ್ಳಿ, ಕೃಪ ದಿಂಡವಾಡ, ಸಾಯಿಕೇಶವ ಹೂಗಾರ, ಕಾರ್ತಿಕ ದೇಸಾಯಿ, ಪರಶುರಾಮ ವಾಲಿಕಾರ, ಪೈರಾಜ ಶಲವಡಿ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದು, ಪ್ರಾಚಾರ್ಯ ಎನ್.ಕೆ ಹತ್ತಿಕಾಳ, ದೈಹಿಕ ಶಿಕ್ಷಕ ಕೆ.ಪಿ ಪಾಟೀಲ ಹಾಗೂ ಶಿಕ್ಷಕರು ಅಭಿನಂದಿಸಿದ್ದಾರೆ.


## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ರೈತರೊಂದಿಗೆ ಸೌಜನ್ಯದಿಂದ ವರ್ತಿಸಿ

▶▶ ಮೊದಲನೇ ಪುಟದಿಂದ

> ಲಕ್ಷ್ಮೇಶ್ವರ ವಿಭಾಗದ ಹೆಸ್ಕಾಂ ವತಿಯಿಂದ ಪಂಪ್ ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆ, ಮಧ್ಯರಾತ್ರಿ ಎರಡು ಗಂಟೆಗೆ ವಿದ್ಯುತ್ ನೀಡುತ್ತಿದ್ದು, ಈ ಸಂದರ್ಭದಲ್ಲಿ ವಿದ್ಯುತ್ ವ್ಯತ್ಯಯ ಮೇಲಿಂದ ಮೇಲೆ ಆಗುತ್ತಿದೆ. ಅದ್ದರಿಂದ ಹಗಲು ಹೊತ್ತಿನಲ್ಲಿ ವಿದ್ಯುತ್ ಪೂರೈಸುವ ಕುರಿತು, ಹೆಸ್ಕಾಂ ಸಹಾಯವಾಣಿ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ, ಗ್ರಾಹಕರ ಸಭೆ ನಿಯಮಿತವಾಗಿ ಜರುಗುತ್ತಿಲ್ಲ ಎಂದು ಸಮಸ್ಯೆಗಳನ್ನು ಸಭೆಯ ಗಮನಕ್ಕೆ ತಂದರು. ರೈತರಿಗೆ ಬರಬೇಕಾದ ಬೆಳೆ ವಿಮೆ, ವೃದ್ಧಾಪ್ಯವೇತನ, ಅನ್ನಭಾಗ್ಯ, ನರೇಗಾ ಕೂಲಿಗಳನ್ನು ಸಾಲದ ಕಂತುಗಳಿಗಾಗಿ ತಡೆ ಹಿಡಿಯಲಾಗುತ್ತಿದೆ. ಅಲ್ಲದೇ ಬ್ಯಾಂಕ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ರೈತರಿಗೆ ಸರಿಯಾಗಿ ಸ್ಪಂದನೆ ನೀಡುತ್ತಿಲ್ಲ.
>
> –ರೈತ ಮುಖಂಡರು.

ಗಂಭೀರವಾಗಿದೆ. ಸರ್ಕಾರದಿಂದ ಫಲಾನುಭವಿಗಳ ಖಾತೆಗಳಿಗೆ ಬೆಳೆ ವಿಮೆ, ವೃದ್ಧಾಪ್ಯ ವೇತನ, ಅನ್ನಭಾಗ್ಯ, ನರೇಗಾ ಕೂಲಿ ಮೊತ್ತವನ್ನು ಅರ್ಹ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುತ್ತಿದೆ. ಈ ಮೊತ್ತವನ್ನು ಯಾವುದೇ ಕಾರಣಕ್ಕೂ ಅವರ ಸಾಲದ ಕಂತುಗಳಿಗಾಗಿ ಕಡಿತವಾಗಿ ಹಾಗೂ ಖಾತೆಗಳನ್ನು ಸ್ಥಗಿತಗೊಳಿಸದಂತೆ ಸೂಚನೆ ನೀಡಿದರು.

ಗ್ರಾಮೀಣ ಭಾಗದ ಕೆಲವೊಂದು ಬ್ಯಾಂಕ್ ಶಾಖೆಗಳಲ್ಲಿನ ಅಧಿಕಾರಿ ಸಿಬ್ಬಂದಿಗಳು ರೈತರೊಂದಿಗೆ ಸೌಜನ್ಯದಿಂದ ವರ್ತಿಸದೇ ಸರಿಯಾದ ಮಾಹಿತಿ ನೀಡುತ್ತಿಲ್ಲ ಎಂಬ ದೂರುಗಳಿದ್ದು, ಈ ಕುರಿತು ಜಿಲ್ಲೆಯ ಎಲ್ಲ ಬ್ಯಾಂಕ್ ಶಾಖೆಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ತಿಳಿಸಿದರು. ಲೀಡ್ ಬ್ಯಾಂಕ್ ಮ್ಯಾನೇಜರ್ ಅವರು ಲಕ್ಷ್ಮೇಶ್ವರಕ್ಕೆ ಭೇಟಿ ನೀಡಿ ಸಮಸ್ಯೆಗಳನ್ನು ಪರಿಹರಿಸಲು ಸೂಚನೆ ನೀಡಲಾಗಿದೆ. ಇಂತಹ ಸಮಸ್ಯೆಗಳನ್ನು ಸಮಾಧಾನವಾಗಿ ಪರಿಹರಿಸಿ ರೈತರಿಗೆ ಅನುಕೂಲ ಮಾಡಿಕೊಡುವಂತೆ ಸೂಚನೆ ನೀಡಿದರು. ಮಳೆ ಕೊರತೆಯಿಂದಾಗಿ ಜಾನುವಾರುಗಳಿಗೆ ಅಗತ್ಯದ ಮೇವಿನ ದಾಸ್ತಾನಿನ ಮಾಹಿತಿ ಪಡೆದ ಸಚಿವರು, ಜಾನುವಾರುಗಳಿಗೆ ಉತ್ತಮ ಗುಣಮಟ್ಟದ ಮೇವನ್ನು ಬೆಳೆಸಲು ಹಾಗೂ ಜಿಲ್ಲೆಗೆ ಬೇಕಾಗಬಹುದಾದ ಮೇವಿನ ಅಗತ್ಯತೆಗೆ ಅನುಗುಣವಾಗಿ ಮೇವನ್ನು ಬೆಳೆಸಲು ಕ್ರಮಕೈಗೊಳ್ಳುವಂತೆ ತೋಟಗಾರಿಕೆ ಉಪನಿರ್ದೇಶಕರಿಗೆ ತಿಳಿಸಿದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಮಾತನಾಡಿ, ಸಾಮಾಜಿಕ ಭದ್ರತೆ ಯೋಜನೆಯಡಿಯ ಹಣವನ್ನು ಸಾಲ ಹೊಂದಾಣಿಕೆ ಮೊತ್ತಕ್ಕೆ ಕಡಿತ ಮಾಡದಂತೆ ಎಲ್ಲ ಬ್ಯಾಂಕುಗಳಿಗೆ ನಿರ್ದೇಶನ ನೀಡಲಾಗಿದೆ. ಅಲ್ಲದೇ ಲಕ್ಷ್ಮೇಶ್ವರಕ್ಕೆ ಭೇಟಿ ನೀಡಿ ಅಲ್ಲಿನ ಸಮಸ್ಯೆಗಳನ್ನು ಪರಿಹರಿಸಲು ಕೂಡಲೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ವಿವಿಧ ಬ್ಯಾಂಕುಗಳ ಅಧಿಕಾರಿಗಳು ಸೇರಿದಂತೆ ರೈತ ಮುಖಂಡರು ಹಾಗೂ ಪ್ರತಿನಿಧಿಗಳು ಹಾಜರಿದ್ದರು.

# ಅಂಗಡಿ, ವಾಣಿಜ್ಯ ಸಂಸ್ಥೆಗಳ ನೋಂದಣಿ ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆಯನ್ವಯ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲದೇ ಹೋಟೆಲ್, ರೆಸ್ಟೋರೆಂಟ್, ಬೇಕರಿ, ಕೆಫೆ, ಆಡಳಿತ ಕಚೇರಿ, ದಿನಸಿ ಅಂಗಡಿ ಸೇರಿದಂತೆ ಯಾವುದೇ ಕಾರ್ಮಿಕರನ್ನು ಹೊಂದಿಲ್ಲದಿದ್ದರೂ, ರಾಜ್ಯದ ಎಲ್ಲ ಅಂಗಡಿ/ ವಾಣಿಜ್ಯ ಸಂಸ್ಥೆಗಳು ಪ್ರಾರಂಭವಾದ ದಿನಾಂಕದಿಂದ 30 ದಿನಗಳೊಳಗೆ ಕಾಯ್ದೆ / ನಿಯಮಾನುಸಾರ ನೋಂದಣಿ ಮಾಡಿಸುವುದು ಕಡ್ಡಾಯವಾಗಿರುತ್ತದೆ. ಈ ನೋಂದಣಿ ಪ್ರಕ್ರಿಯೆಯಿಂದ ಕಾಯ್ದೆ/ ನಿಯಮಗಳ ಪಾಲನೆಯಾಗುತ್ತದೆ. ಸದರಿ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರಿಗೆ ಸೇವಾ ಭದ್ರತೆ ನೀಡುವುದು, ಕಾರ್ಮಿಕರ ಸಂಖ್ಯೆಗನುಗುಣವಾಗಿ ಕಾನೂನುಬದ್ಧ ಸೌಲಭ್ಯಗಳನ್ನು ಒದಗಿಸಿಕೊಡುವುದು ಈ ಕಾಯ್ದೆಯ ಉದ್ದೇಶವಾಗಿರುತ್ತದೆ. ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ನೋಂದಣಿ ಕಾನೂನು ಪ್ರಕಾರ ಕಡ್ಡಾಯವಾಗಿದ್ದು, ನೋಂದಣಿಯಾಗದೇ ಇದ್ದ ಪಕ್ಷದಲ್ಲಿ ನಿಯಮಾನುಸಾರ ಕಾನೂನು ಕ್ರಮ ಸಕ್ರಮ ಪ್ರಾಧಿಕಾರದ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಿಸಲು ಅವಕಾಶವಿರುತ್ತದೆ.

ಎಲ್ಲ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಕಾರ್ಮಿಕ ಇಲಾಖೆಯ ಅಭಿವೃದ್ಧಿ ಪಡಿಸಿರುವ www.ekarmika.karnataka.gov.in/ekarmika/static/home.aspx ವೆಬ್ ಸೈಟ್ ನಲ್ಲಿ ಲಾಗಿನ್ ಆಗಿ ತಮ್ಮ ಸಂಸ್ಥೆಯ ವಿಳಾಸ, ಮಾಲೀಕರ ಹೆಸರು, ವ್ಯಾಪಾರದ ಸ್ವರೂಪ ಮಾಹಿತಿಗಳನ್ನು ನಮೂದಿಸಿ ಕಾರ್ಮಿಕರ ಸಂಖ್ಯೆಗೆ ಅನುಗುಣವಾಗಿ ಆನ್‌ಲೈನ್ ಶುಲ್ಕವನ್ನು ಪಾವತಿಸಬಹುದಾಗಿದೆ. ಅಗತ್ಯ ದಾಖಲಾತಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಿ ನೋಂದಣಿ ಪತ್ರವನ್ನು ಸಹ ಆನ್‌ಲೈನ್ ಮೂಲಕ ಪಡೆದುಕೊಳ್ಳಬಹುದಾಗಿದೆ. ಈ ನೋಂದಣಿಯು ಮುಂದಿನ 5 ವರ್ಷಗಳವರೆಗೆ ಚಾಲ್ತಿಯಲ್ಲಿರುತ್ತದೆ. ನೋಂದಣಿ ಮಾಡುವ ಪ್ರಕ್ರಿಯೆಯಲ್ಲಿ ಯಾವುದೇ ವ್ಯತ್ಯಾಸ ಸಮಸ್ಯೆ ಕಂಡುಬಂದಲ್ಲಿ ಇಲಾಖೆಯ ಸಹಾಯವಾಣಿ 080–29753059 ಅಥವಾ 155214 ಅಥವಾ ಇಮೇಲ್ ವಿಳಾಸ ekarmikalabour@gmail.com ಮತ್ತು ಕಾರ್ಮಿಕ ಇಲಾಖೆಯ ಅಧಿಕೃತ ಜಾಲತಾಣ karmikaspandana.karnataka.gov.in ವೆಬ್‌ಸೈಟ್‌ನಲ್ಲಿ ಕ್ಷೇತ್ರವಾರು ಅಧಿಕಾರಿ/ ಕಾರ್ಮಿಕ ನಿರೀಕ್ಷಕರ ಹೆಸರು, ದೂರವಾಣಿ ಸಂಖ್ಯೆ ವಿವರಗಳನ್ನು ಪ್ರಕಟಿಸಿದ್ದು, ಇವರುಗಳ ಸಹಾಯವನ್ನು ಪಡೆದು ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ವಯ ನೋಂದಣಿಯನ್ನು ಮಾಡಿಸಬಹುದಾಗಿರುತ್ತದೆ ಎಂದು ಗದಗ ಜಿಲ್ಲಾ ಕಾರ್ಮಿಕ ಇಲಾಖೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ನಗರಸಭೆ ಸಾಮಾನ್ಯ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ನಗರಸಭೆಯ ಸಾಮಾನ್ಯ ಸಭೆಯು ಆಗಸ್ಟ್ 30 ರಂದು ಸಾಯಂಕಾಲ 4 ಗಂಟೆಗೆ ನಗರಸಭೆ ಸಭಾಭವನದಲ್ಲಿ ಜರುಗಲಿದೆ ಎಂದು ಪೌರಾಯುಕ್ತ ರಮೇಶ ಸುಣಗಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎನ್‌ಇಪಿ ರದ್ದುಪಡಿಸದಂತೆ ಸರಕಾರಕ್ಕೆ ಎಬಿವಿಪಿ ಮನವಿ

▶▶ ಮೊದಲನೇ ಪುಟದಿಂದ

ವಿದ್ಯಾರ್ಥಿಗಳ ಹಿತದ ಹಿನ್ನೆಲೆಯಲ್ಲಿ ಸರಿಪಡಿಸಿಕೊಂಡು ಎನ್‌ಇಪಿ ರದ್ದುಗೊಳಿಸುವ ನಿಲುವನ್ನು ಕೈಬಿಡಬೇಕೆಂದು ಆಗ್ರಹಿಸಿದರು.

ಈ ವೇಳೆ ತಾಲೂಕಾ ಸಂಚಾಲಕ ಮಾಂತೇಶ ಮಣಕವಾಡ, ನಗರ ಕಾರ್ಯದರ್ಶಿ ಶರಣಪ್ಪ ಶಿವನಗೌಡ್ರ, ಪ್ರದೀಪ ಶೇಟ್ಟರ, ಸೋಮು ಭದ್ರಾಪುರ, ಗಂಗಾಧರ ಸುಣಗಾರ, ವಿನಾಯಕ ಉಮಚಗಿ, ರಾಜಶೇಖರ ಅಕ್ಕೂರ, ಮನೋಜ ಹುಳ್ಳಿ, ಸಾಗರ ಮೆಹರವಾಡೆ, ಕಾರ್ತಿಕ ಕೊಡ್ಲಿ, ಶಶಿಕುಮಾರ ಜೋಗೆರ ಮತ್ತಿತರಿದ್ದರು. ತಹಸೀಲ್ದಾರ ಕಚೇರಿಯಿಂದ ಶಿರಸ್ತೇದಾರ ರೇಣುಕಾ ಎಂ.ಮನವಿ ಸ್ವೀಕರಿಸಿದರು.

## ಭಕ್ತರ ಪೂರ್ವಭಾವಿ ಸಭೆಯಲ್ಲಿ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು

# ತ್ರಿಕೋಟಿ ಶಿವಲಿಂಗ ಸ್ಥಾಪನಾ ಕಾರ್ಯಕ್ಕೆ ಭೂಮಿಪೂಜೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

'ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ' ಎಂಬ ವಿಶ್ವಮಾನವ ಸಂದೇಶ ಸಾರಿದ ಪರಮ ತಪಸ್ವಿ ಲಿಂ.ವೀರಗಂಗಾಧರ ಜಗದ್ಗುರುಗಳ ಸತ್ಸಂಕಲ್ಪದಂತೆ ಭೂಕೈಲಾಸ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಮಹೋನ್ನತ ಕಾರ್ಯಕ್ಕೆ ಸೆ.13ರ ಬುಧವಾರ ಬೆಳಿಗ್ಗೆ 10ಕ್ಕೆ ಧರ್ಮಕ್ಷೇತ್ರದಲ್ಲಿ ಭೂಮಿಪೂಜೆ ನೆರವೇರಲಿದೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.



> ಶ್ರೀಕ್ಷೇತ್ರದಲ್ಲಿ ಜಪ–ತಪಗಳ ಮುಖಾಂತರ ಭೂಕೈಲಾಸವನ್ನೇ ಸೃಷ್ಟಿಸಿರುವ ಲಿಂ. ಗಂಗಾಧರ ಶ್ರೀಗಳವರು ಲಿಂಗೈಕ್ಯರಾದ ಬಳಿಕ 40 ವರ್ಷಗಳ ಕಾಲದಿಂದ ಅನೇಕ ಹಿರಿಯರ, ಭಕ್ತರ ಸಹಕಾರದಿಂದ ಬೇಕಾಗುವ 5 ಸಾವಿರ ಶಿವಲಿಂಗಗಳಲ್ಲಿ 4500 ಶಿವಲಿಂಗಗಳನ್ನು ಸಂಗ್ರಹಿಸಲಾಗಿದೆ. ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಕಾರ್ಯ ನಿರಂತರ 11 ತಿಂಗಳ ಕಾಲ ನಡೆಯುವ ಪರಮಶ್ರೇಷ್ಠ ಕಾರ್ಯದಲ್ಲಿ ಲಕ್ಷ್ಮೇಶ್ವರ, ಕುಂದಗೋಳ ತಾಲೂಕಿನ ಭಕ್ತಗಣವೆಲ್ಲ ಪಕ್ಷ, ಜಾತಿ, ಧರ್ಮ ಬೇಧ–ಭಾವ ಮರೆತು ಕಾಯಾವಾಚಾಮನಸಾ ಪೂರ್ವಕ ಪಾಲ್ಗೊಂಡು ಪುನೀತರಾಗಬೇಕು. ಯಾರೂ ನಮ್ಮನ್ನು ಕರೆದಿಲ್ಲ, ಕೇಳಿಲ್ಲ ಎಂಬ ಭಾವನೆ ಬೇಡ.
>
> – ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು.
> ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರು.

ಅವರು ಮಂಗಳವಾರ ಪಟ್ಟಣದ ರಂಭಾಪುರಿ ಕಲ್ಯಾಣ ಮಂಟಪದಲ್ಲಿ ನಡೆದ ಭಕ್ತರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಬಾಳೆಹೊನ್ನೂರಿನ ರಂಭಾಪುರಿ ಡಾ.ವೀರಸೋಮೇಶ್ವರ ಶಿವಾಚಾರ್ಯರ ಕೃಪಾಶೀರ್ವಾದ ಮತ್ತು ನೊಣವಿನಕೆರೆ ಕಾಡಸಿದ್ಧೇಶ್ವರಮಠ ಡಾ. ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಶ್ರೀಗಳ ಸಾನ್ನಿಧ್ಯದಲ್ಲಿ ಭೂಮಿಪೂಜೆ ನೆರವೇರಲಿದೆ. ಭೂಮಿಪೂಜೆ ಕಾರ್ಯಕ್ರಮದಲ್ಲಿ ಹಾಲಿ–ಮಾಜಿ ಮಂತ್ರಿಗಳು, ಶಾಸಕರು, ಜನಪ್ರತಿನಿಧಿಗಳು, ಹಿರಿಯರು ಉಪಸ್ಥಿತರಿರುವರು. ಸರ್ವಧರ್ಮ ಸಮನ್ವಯಾಚಾರ್ಯ ಲಿಂ.ಜ.ವೀರಗಂಗಾಧರ ಶಿವಾಚಾರ್ಯ ಮಹಾಸ್ವಾಮಿಗಳು ಈ ಕ್ಷೇತ್ರದಲ್ಲಿ ಲೋಕ ಕಲ್ಯಾಣಕ್ಕಾಗಿ ತ್ರಿಕೋಟಿ ಶಿವಲಿಂಗಗಳನ್ನು ಸ್ಥಾಪಿಸಬೇಕೆನ್ನುವ ಕನಸನ್ನು ಕಂಡು, ಅದಕ್ಕಾಗಿ ಸಾಕಷ್ಟು ಪ್ರಯತ್ನವನ್ನು ಮಾಡಿದರು. ಶ್ರೀಗಳು ಮನಸ್ಸು ಮಾಡಿದ್ದರೆ ಅಂದೇ ನಾಡಿನ ಒಬ್ಬ ಶ್ರೀಮಂತ ವ್ಯಕ್ತಿಯಿಂದಲೇ ಆ ಕಾರ್ಯ ಮಾಡಿ ಮುಗಿಸುತ್ತಿದ್ದರು. ಆದರೆ ನಾಡಿನ ಎಲ್ಲ ಭಕ್ತರ ಸಹಾಯ ಸಹಕಾರದಿಂದಲೇ ಈ ಪುಣ್ಯ ಕಾರ್ಯ ಪೂರ್ಣಗೊಳ್ಳಬೇಕೆಂಬುದು ಶ್ರೀಗಳ ಆಶಯವಾಗಿತ್ತು ಎಂದರು.

ಸಭೆಯಲ್ಲಿ ಮಾತನಾಡಿದ ವಿ.ಪ ಸದಸ್ಯ ಎಸ್.ವಿ ಸಂಕನೂರ, ಡಾ.ಚಂದ್ರು ಲಮಾಣಿ, ನಡೆದಾಡುವ ದೇವರೆಂದೇ ಪೂಜನೀಯರಾಗಿರುವ ಲಿಂ.ವೀರಗಂಗಾಧರ ಜಗದ್ಗುರುಗಳ ಸಂಕಲ್ಪದಂತೆ ನಡೆಯುತ್ತಿರುವ ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಕಾರ್ಯಕ್ಕೆ ನಾವೂ ಸಹ ಕೈಲಾದಮಟ್ಟಿನ ಸಹಾಯ-ಸಹಕಾರ ನೀಡುತ್ತೇವೆ ಮತ್ತು ಈ ಕಾರ್ಯ ಪೂರ್ಣಗೊಳ್ಳುವವರೆಗೂ ಸೇವಾಕಾರ್ಯಕ್ಕೆ ಬದ್ಧರಾಗಿರುತ್ತೇವೆ ಎಂದರು.

ಮಾಜಿ ಶಾಸಕರಾದ ಜಿ.ಎಂ ಮಹಾಂತಶೆಟ್ಟರ, ಜಿ.ಎಸ್ ಗಡ್ಡದೇವರಮಠ ಮಾತನಾಡಿ, ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಬಳಿಕ ಮುಕ್ತಿಮಂದಿರ ವಿಶ್ವವಿಖ್ಯಾತ ಪವಿತ್ರ ಧಾರ್ಮಿಕ ಕ್ಷೇತ್ರವಾಗಿ ಬೆಳಗಲಿದೆ. ಬರುವ ಭಕ್ತರಿಗೆ ಮೂಲಸೌಕರ್ಯ, ನಿರಂತರ ಪ್ರಸಾದ ವ್ಯವಸ್ಥೆ ಮಠದಲ್ಲಿ ನಡೆಯಬೇಕು. ತ್ರಿಕೋಟಿ ಶಿವಲಿಂಗ ಸ್ಥಾಪನೆಗೆ ಅಗತ್ಯವಿರುವ ಇನ್ನು 500 ಶಿವಲಿಂಗಗಳಿಗಾಗಿ ಈಗಾಗಲೇ ವಾಗ್ದಾನ ಮಾಡಿದ ಭಕ್ತರನ್ನು ಶ್ರೀಗಳು ಸಂಪರ್ಕಿಸಬೇಕು. ಶ್ರೀಗಳು ಕೈಗೊಳ್ಳುವ ಭಕ್ತರ ಮನೆ ಭೇಟಿ, ಪಾದಯಾತ್ರೆ, ಸಂಪರ್ಕ ಸಂಗ್ರಹ ಕಾರ್ಯಕ್ಕೆ ನಾವೆಲ್ಲ ಬೆಂಬಲವಾಗಿ ನಿಲ್ಲುತ್ತೇವೆ. ಸಹಾನುಭೂತಿ, ಪ್ರೀತಿ, ವಿಶ್ವಾಸದಿಂದ ಭಕ್ತರನ್ನು ಮಹೋನ್ನತ ಕಾರ್ಯದಲ್ಲಿ ತೊಡಗಿಸಿಕೊಳ್ಳೋಣ ಎಂದರು.

ಈ ವೇಳೆ ಮಳೆಮಲ್ಲಿಕಾರ್ಜುನ ಸ್ವಾಮಿಗಳು, ಎಸ್.ಪಿ ಬಳಿಗಾರ, ಚನ್ನಪ್ಪ ಕೋಲಕಾರ, ದೇವಣ್ಣ ಬಳಿಗಾರ, ಪಿ.ಬಿ ಖರಾಟೆ, ಬಸಣ್ಣ ಬೆಂಡಿಗೇರಿ, ನಿಂಗಪ್ಪ ಬನ್ನಿ, ವಿಜಯಣ್ಣ ಮಹಾಂತಶೆಟ್ಟರ, ವಿ.ಜಿ ಪಡಗೇರಿ ಸೇರಿ ಹಲವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಚಂಬಣ್ಣ ಬಾಳಿಕಾಯಿ, ಬಸಣ್ಣ ಕೊಟಗಿ, ಎಸ್.ಪಿ ಪಾಟೀಲ, ಅಶೋಕ ಪಲ್ಲೇದ, ದೊಡ್ಡಪ್ಪ ಅಮ್ಮಿನಬಾವಿ, ಈಶ್ವರ ಬಂಡಿವಾಡ, ಎಂ ಸಿದ್ದಲಿಂಗಯ್ಯ, ಈರಣ್ಣ ಅಂಕಲಕೋಟಿ, ವಿಜಯ ಮೆಕ್ಕಿ, ಬಸವರಾಜ ಮೆಣಸಿನಕಾಯಿ, ಜಯಕ್ಕ ಕಳ್ಳಿ, ಸುರೇಶ ರಾಚನಾಯ್ಕರ, ಶೇಖಪ್ಪ ಹುರಕಡ್ಲಿ, ವಿರೂಪಾಕ್ಷ ಆದಿ ಸೇರಿ ಅನೇಕರಿದ್ದರು. ಸೋಮಣ್ಣ ಡಾಣಗಲ್ ನಿರೂಪಿಸಿದರು.

# 3ರಂದು ಸಚಿವ ಬಿ.ನಾಗೇಂದ್ರರಿಂದ ನೂತನ ಈಜುಕೊಳ ಲೋಕಾರ್ಪಣೆ

▶▶ ಮೊದಲನೇ ಪುಟದಿಂದ

ತುಂಬಾ ಉಪಯುಕ್ತವಾಗಿದ್ದು, ಈ ಯೋಜನೆ ಮೂಲಕ ರಾಜ್ಯದಲ್ಲಿ ಕ್ರಾಂತಿಕಾರಕ ಬದಲಾವಣೆ ಆಗಲಿದೆ. ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದಾಗಿ ಕುಟುಂಬಗಳಿಗೆ ವಾರ್ಷಿಕ 50–60 ಸಾವಿರ ಆರ್ಥಿಕ ಸಹಾಯ ದೊರೆಯುತ್ತದೆ. ರಾಜ್ಯ ಸರ್ಕಾರದ ಗ್ಯಾರಂಟಿಗಳ ಅನುಷ್ಠಾನದಿಂದ ರಾಜ್ಯದ 1.4 ಕೋಟಿ ಕುಟುಂಬಗಳು ಬಡತನ ರೇಖೆಗಿಂತ ಮೇಲೆ ಬರಲಿವೆ ಇದೊಂದು ಕ್ರಾಂತಿಕಾರಕ ಬೆಳವಣಿಗೆಯಾಗಿದೆ.

ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಇಂದಿರಾ ಗಾಂಧಿಯವರ ಬಡತನ ನಿರ್ಮೂಲನೆಯ ಕನಸು ಈಡೇರಿದಂತಾಗಿದೆ ಎಂದು ಸಚಿವ ಎಚ್.ಕೆ.ಪಾಟೀಲ ಹೇಳಿದರು.

ಜಿಲ್ಲಾಧಿಕಾರಿ ವೈಶಾಲಿ. ಎಂ. ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಗಂಗಾಧರ ಶಿರೋಳ, ಪ್ರಭು ಬುರಬುರೆ, ಸಿದ್ದು ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗಣ್ಯರು, ಹಿರಿಯರು ಹಾಜರಿದ್ದರು.

# ಮಾನವನ ಆತ್ಮೋನ್ನತಿಗೆ ಧಾರ್ಮಿಕ ಕಾರ್ಯಗಳು ಸಹಕಾರಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ದಿನವಿಡೀ ತನ್ನ ಉಪ ಜೀವನಕ್ಕೆ ದುಡಿಯುವ ಮಾನವ ಮನಸ್ಸಿನ ನೆಮ್ಮದಿಗಾಗಿ ಹುಡುಕಾಡುತ್ತಾನೆ. ಈ ನೆಮ್ಮದಿ ಅವನಿಗೆ ಧಾರ್ಮಿಕ ಕಾರ್ಯಗಳಲ್ಲಿ ದೊರಕುತ್ತದೆ. ಧಾರ್ಮಿಕ ಕಾರ್ಯಗಳನ್ನು ನೆರವೇರಿಸುವುದರಿಂದ ಅವನು ಸಂತೋಷಿತನಾಗುತ್ತಾನೆ. ಹೀಗಾಗಿ, ಮಾನವನ ಆತ್ಮೋನ್ನತಿಗೆ ಧಾರ್ಮಿಕ ಕಾರ್ಯಗಳು ಸಹಕಾರಿಯಾಗಿವೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಹೇಳಿದರು.

ಸಮೀಪದ ಮಾರನಬಸರಿ ಗ್ರಾಮದ ಶ್ರೀ ತ್ರ್ಯಂಬಕೇಶ್ವರ ದೇವಸ್ಥಾನದಲ್ಲಿ ನಡೆದ ಧಾರ್ಮಿಕ ಕಾರ್ಯಗಳ ಮುಕ್ತಾಯ ಸಮಾರಂಭದಲ್ಲಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ದೇವಸ್ಥಾನದ ಪ್ರಧಾನ ಅರ್ಚಕ ವಿಶ್ವನಾಥಭಟ್ಟ ವೈದ್ಯ ಮಾತನಾಡಿ, ಭಕ್ತರ ಉದ್ಧಾರಕ್ಕೆಂದೇ ಇಲ್ಲಿ ಪ್ರತಿ ವರ್ಷವೂ ಅನೇಕ ಧಾರ್ಮಿಕ ಕಾರ್ಯಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಸುತ್ತಲಿನ ಗ್ರಾಮಗಳ ಭಕ್ತರೂ ಸಹ ಈ ಎಲ್ಲ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವ ಮೂಲಕ ಪುಣ್ಯ ಸಂಪಾದನೆ ಮಾಡುತ್ತಾರೆ ಎಂದರು.

ಈ ಸಂದರ್ಭದಲ್ಲಿ ಸಂಗೀತ ಸೇವೆ ಅಷ್ಠಾವಧಾನ, ಭಜನೆ, ಶೇಜಾರತಿ ಕಾರ್ಯಕ್ರಮಗಳು ನಡೆದವು. ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ದಂಪತಿಗಳನ್ನು ಸನ್ಮಾನಿಸಲಾಯಿತು.

ನಿವೃತ್ತ ಉಪನ್ಯಾಸಕ ಎಸ್.ಎಚ್ ಕುಲಕರ್ಣಿ ನಿರೂಪಿಸಿದರು. ರಮೇಶ ಕುಲಕರ್ಣಿ ಸ್ವಾಗತಿಸಿದರು. ಧಾರ್ಮಿಕ ಕಾರ್ಯಗಳ ನೇತೃತ್ವವನ್ನು ಅಪ್ಪಣ್ಣಭಟ್ಟ ಸೊರಟೂರ, ಶ್ರೀವಲ್ಲಭಭಟ್ಟ ಸದರಜೋಷಿ, ಅರುಣ ಗ್ರಾಮಪುರೋಹಿತ ವಹಿಸಿದ್ದರು. ಸಂಜೀವ ಕುಲಕರ್ಣಿ ವಂದಿಸಿದರು.

# ನಾಳೆ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿಯನ್ನು ಆಗಸ್ಟ್ 31 ರಂದು ಸಂಜೆ 4.30 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರ ಘನ ಉಪಸ್ಥಿತಿಯಲ್ಲಿ ಜರುಗುವ ಈ ಕಾರ್ಯಕ್ರಮವನ್ನು ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು , ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ವಿ ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕರಾದ ಜಿ.ಎಸ್. ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷರಾದ ಉಷಾ ಮಹೇಶ್ ದಾಸರ, ಗದಗ ಬೆಟಗೇರಿ ನಗರ ಸಭೆ ಉಪಾಧ್ಯಕ್ಷರಾದ ಸುನಂದ ಪ್ರಕಾಶ ಬಾಕಳೆ ಆಗಮಿಸುವರು.

ಗದಗ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜ ಪ್ರಾಧ್ಯಾಪಕ ಪ್ರೊ. ಸಿದ್ಧಲಿಂಗೇಶ ಸಜ್ಜನಶೆಟ್ಟರ್ ಬ್ರಹ್ಮ ಶ್ರೀ ನಾರಾಯಣ ಗುರುಗಳ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡುವರು. ಮಲ್ಲೇಶ ಹೂಗಾರ ವಚನ ಗಾಯನ ಪ್ರಸ್ತುತ ಪಡಿಸುವರು.

ವಾಣಿಜ್ಯ ತೆರಿಗೆ ಇಲಾಖೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಶ್ರೀಮತಿ ಸಿ. ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ. ಎಸ್. ನೇಮಗೌಡ ಸರ್ವರಿಗೂ ಸ್ವಾಗತ ಕೋರಿದ್ದಾರೆ.

# ಜಾನಪದ ಕಲೆಗಳನ್ನು ಮಕ್ಕಳಿಗೆ ಕಲಿಸಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳ ಕಲಿಕೆಗೆ ಜಾನಪದವೇ ಶ್ರೇಷ್ಠವಾದ ಕಲೆಯಾಗಿದೆ ಎಂದು ಶಿರಹಟ್ಟಿ ತಾಲೂಕಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ ಬಳಿಗೇರ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ನಡೆದ ಪುರಾಣ ಪ್ರವಚನದಲ್ಲಿ ಉಪನ್ಯಾಸ ನೀಡಿ, ಜಾನಪದದ ಒಂದು ಭಾಗವಾಗಿರುವ ಜನಪದ ಕಲೆಗಳು ನಾಡಿನ ಸಂಸ್ಕೃತಿಯ ಸಾಮರ್ಥ್ಯಕ್ಕೆ ಮುಖ್ಯ ಆಧಾರವಾಗಿದೆ. ಇಂತಹ ಜನಪದ ಕಲೆಗಳನ್ನು ಮಕ್ಕಳಿಗೆ ಮನೆಯಲ್ಲಿ ಕಲಿಸಿ, ಉಳಿಸಿ, ಬೆಳೆಸಬೇಕು ಎಂದರು.



ಪುರಾಣ ಪ್ರವಚನಕಾರ ಪಿ.ಎಸ್ ಮರಿದೇವರಮಠ, ಎಸ್.ಎಂ ಉಜ್ಜಣ್ಣವರ, ಲಲಿತಾ ಎಂ.ಅರಳಿ, ಶಂಕ್ರಪ್ಪ ಮಡ್ಡಿ, ಮಾಹಾಂತೇಶ ಬಳ್ಳಾರಿ, ಮುರಿಗೇಶ ನಪೂರಿಮಠ ಇದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2023–24ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಆರ್ಯ ವೈಶ್ಯ ಆಹಾರ ವಾಹಿನಿ ಯೋಜನೆ, ವಾಸವಿ ಜಲಶಕ್ತಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಗಳಡಿ ಸಾಲ–ಸೌಲಭ್ಯವನ್ನು ಪಡೆಯಲು ಇಚ್ಚಿಸುವವರು ಕಡ್ಡಾಯವಾಗಿ ಆನ್‌ಲೈನ್ ವಿಳಾಸ:kacdc.karnataka.gov.in ಮೂಲಕ ಅರ್ಜಿ ಸಲ್ಲಿಸಬೇಕಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 18 ಕೊನೆಯ ದಿನವಾಗಿದೆ.

ಆಸಕ್ತರು ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿರಬೇಕು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ–ಜಿ ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು), ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು, ಅರ್ಜಿದಾರರು ತಮ್ಮ ಆಧಾರ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು, ಅರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ ಸಂಖ್ಯೆಯನ್ನು ಸೀಡ್ ಮಾಡಿಸಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33%, ವಿಕಲಚೇತನರಿಗೆ ಶೇ.5% ಹಾಗೂ ತೃತೀಯ ಲಿಂಗಳಿಗೆ ಶೇ.5% ಮೀಸಲಾತಿ ಇರಿಸಿದೆ. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. (ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಮಾತ್ರ ಇಬ್ಬರಿಗೆ ಅವಕಾಶವಿರುತ್ತದೆ.)

ಹೆಚ್ಚಿನ ವಿವರಗಳಿಗಾಗಿ ನಿಗಮದ ಸಹಾಯವಾಣಿ: 94484 51111 ಗದಗ ಜಿಲ್ಲಾ ಕಛೇರಿಯ ದೂರವಾಣಿ ಸಂಖ್ಯೆ: ಬೆಳಿಗ್ಗೆ:10.00 ರಿಂದ ಸಂಜೆ:5.30 ವರೆಗೆ ಸಂಪರ್ಕಿಸಬಹುದಾಗಿದೆ ಯೋಜನೆಗಳ ಮಾರ್ಗಸೂಚಿಗಳು, ಸಲ್ಲಿಸಬೇಕಾದ ದಾಖಲೆಗಳು, ಜಿಲ್ಲಾ ವ್ಯವಸ್ಥಾಪಕರಕಛೇರಿ ಜಿಲ್ಲಾ ಆಡಳಿತ ಭವನ ರೂ.ನಂ:202, 2ನೇ ಮಹಡಿ, ಗದಗ ಜಿಲ್ಲೆ ಹಾಗೂ ಎಲ್ಲಾ ವಿವರಗಳನ್ನು kacdc.karnataka.gov.in ಇಲ್ಲಿ ತಿಳಿಯಬಹುದಾಗಿದೆ.

# ರಾಘವೇಂದ್ರಸ್ವಾಮಿಗಳ ಆರಾಧನೆ ನಾಳೆಯಿಂದ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಅನೇಕ ಪ್ರಾಚೀನ ಇತಿಹಾಸ ಹೊಂದಿರುವ ಸ್ಥಳಗಳಿದ್ದು, ಅದರಲ್ಲಿ ಹಿರೇಬಣದಲ್ಲಿರುವ ರಾಘವೇಂದ್ರಸ್ವಾಮಿಗಳ ಮಠವೂ ಒಂದಾಗಿದೆ. ಸುಮಾರು 303 ವರ್ಷಗಳ ಹಿಂದೆ ಲಕ್ಷ್ಮೇಶ್ವರದಲ್ಲಿ ಇಟಗಿ ಮನೆತನದವರು ರಾಯರ ಮೃತ್ತಿಕಾ ಬೃಂದಾನವನ್ನು ಅವರ ಮನೆಯಲ್ಲಿ ಪ್ರತಿಷ್ಠಾಪಿಸಿದ್ದು, ಅಂದಿನಿಂದ ಈ ಭಾಗದಲ್ಲಿ ರಾಯರ ಮಠ ಸ್ಥಾಪನೆಯಾಗಿ ಸಾವಿರಾರು ಭಕ್ತರನ್ನು ಸೆಳೆಯುತ್ತಿದೆ.

ಕಲಿಯುಗದ ಕಾಮಧೇನು ರಾಘವೇಂದ್ರಸ್ವಾಮಿಗಳ ಆರಾಧನೆಯು ಪ್ರತಿವರ್ಷ ಶ್ರಾವಣ ಮಾಸದ ಬಹುಳ ಪ್ರತಿಪದ, ದ್ವಿತಿಯಾ ಹಾಗೂ ತೃತಿಯಾ ತಿಥಿಗಳಂದು ಆಚರಿಸಲಾಗುತ್ತಿದ್ದು, ಪ್ರತಿವರ್ಷದಂತೆ ಈ ವರ್ಷವೂ ಕೂಡ ಆರಾಧನಾ ಮಹೋತ್ಸವವು ಆ.31 ಗುರುವಾರ, ಸೆ.1 ಶುಕ್ರವಾರ ಹಾಗೂ ಸೆ.2 ಶನಿವಾರದಂದು ರಾಘವೇಂದ್ರಸ್ವಾಮಿಗಳ ಮಠದಲ್ಲಿ ವಿಜೃಂಭಣೆಯಿಂದ ನಡೆಯಲಿದೆ. ಪ್ರತಿದಿನ ಮುಂಜಾನೆ ಸುಪ್ರಭಾತ, ಅಷ್ಟೋತ್ತರ, ಹರಿವಾಯು ಸ್ತುತಿ, ಅಭಿಷೇಕ, ಅಲಂಕಾರ ಪೂಜೆ, ಅನ್ನಸಂತರ್ಪಣೆಗಳು ನಡೆಯಲಿವೆ. ಸಂಜೆ ತಾರತಮ್ಯ ಭಜನೆ, ಉಪನ್ಯಾಸ, ಸ್ಥಳೀಯರಿಂದ ಸಂಗೀತ ಸೇವೆಗಳು ನಡೆಯಲಿವೆ. ಸೆ.2, ಶನಿವಾರ ಬೆಳಿಗ್ಗೆ 10 ಗಂಟೆಗೆ ರಥೋತ್ಸವ ಜರುಗಲಿದೆ. ನಂತರ 12 ಗಂಟೆಗೆ ಶ್ರೀಮಠದಲ್ಲಿ ಭಜನೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಸಂಪ್ರದಾಯದಂತೆ ನೆರವೇರಲಿವೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಧರ್ಮದರ್ಶಿ ಹನುಮಂತಾಚಾರ್ಯ ಹೊಂಬಳ ವಿನಂತಿಸಿದ್ದಾರೆ.


## ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ,

ಸಂ: ಕೃಉಮಾಸ:ಗ: 2023–2024 441 ದಿನಾಂಕ : 28–08–2023

**ಪ್ರಕಟಣೆ**

ಈ ಮೂಲಕ ಯಾವತ್ತೂ ರೈತಬಾಂಧವರಿಗೆ, ಮತ್ತು ಪೇಟೆ ಕಾರ್ಯಕರ್ತರಿಗೆ ತಿಳಿಯಪಡಿಸುವದೇನೆಂದರೆ, ಮಾಲೀಕರಾದ ಕಾಶಿನಾಥ ಶಂಕ್ರಪ್ಪ ಹಂಜಗಿ ಇವರು ದಿನಾಂಕ: 30–04–2021 ರಂದು ನಿಧನರಾದ ಪ್ರಯುಕ್ತ ಅವರ ಪತ್ನಿಯಾದ ಶ್ರೀಮತಿ ಪದ್ಮಾವತಿ ಕಾಶಿನಾಥ ಹಂಜಗಿ ಗದಗ ಇವರ ಹೆಸರಿಗೆ ವಾರಸಾ ಬದಲಾವಣೆ ಮಾಡಲು ಕೋರಿರುತ್ತಾರೆ. ಕಾರಣ ಈ ಕುರಿತು ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಪ್ರಕಟಣೆ ದಿನಾಂಕದಿಂದ 15 ದಿನಗಳ ಒಳಗಾಗಿ ಸಮಿತಿಯ ಕಾರ್ಯದರ್ಶಿಯವರಿಗೆ ಲಿಖಿತ ಮೂಲಕ ಈ ಕಚೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗದಿತ ಅವಧಿಯ ನಂತರ ಬಂದ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/– **ಕಾರ್ಯದರ್ಶಿ** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ

ಸಹಿ/– **ಆಡಳಿತಾಧಿಕಾರಿಗಳು** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ

ಪ ಪೂ ಕಾಲೇಜುಗಳ ತಾಲೂಕಾ ಮಟ್ಟದ ಕ್ರೀಡಾಕೂಟ

# ಜ.ಅ ಪದವಿಪೂರ್ವ ಕಾಲೇಜಿಗೆ ಸಮಗ್ರ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪಟ್ಟಣದ ಜ.ಅ ಪ್ರೌಢಶಾಲೆ ಮೈದಾನದಲ್ಲಿ ಇತ್ತೀಚೆಗೆ ನಡೆದ ಮುಂಡರಗಿ ತಾಲೂಕು ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ಜ.ಅ ಪದವಿಪೂರ್ವ ಕಾಲೇಜು ಸಮಗ್ರ ಪ್ರಶಸ್ತಿ ಪಡೆದುಕೊಂಡಿದೆ.

ಬಾಲಕರ ವೈಯಕ್ತಿಕ ವಿಭಾಗ: ಶಿವರಾಜ ಕಿನ್ನಾಳ 800ಮೀ ಓಟ ಪ್ರಥಮ, ವಿಕಾಸ ಅಳವಂಡಿ 800ಮೀ ಓಟ ದ್ವಿತೀಯ, ವಿಜಯ ಬಾರಕೇರ ಗುಡ್ಡಗಾಡು ಓಟ ಪ್ರಥಮ, 5000ಮೀ ಓಟ, 200ಮೀ ಓಟ ಪ್ರಥಮ, ಕಾರ್ತಿಕ ಹಿರೇಗೌಡ್ರ 3000ಮೀ ಓಟ, ಗುಡ್ಡಗಾಡು ಓಟ ದ್ವಿತೀಯ, ಫಕ್ಕಿರೇಶ ಎಚ್ 1500ಮೀ ಓಟ ತೃತೀಯ, ನಾಗರಾಜ ಬಾರಕೇರ ಗುಂಡು ಎಸೆತ, ಚಕ್ರ ಎಸೆತ ಪ್ರಥಮ, ರೆಹೆಮಾನ ಕತೀಭ ಚಕ್ರ ಎಸೆತ ದ್ವಿತೀಯ, ಅನಿಲ ಲಮಾಣಿ ಭಲ್ಲೆ ಎಸೆತ ಪ್ರಥಮ, ಕಿರಣ ಲಮಾಣಿ ಎತ್ತರ ಜಿಗಿತ ದ್ವಿತೀಯ, ಆಕಾಶ ಗದ್ದಿ ಉದ್ದ ಜಿಗಿತ ತೃತೀಯ.

ಬಾಲಕರ ಗುಂಪು ಆಟ: ವಾಲಿಬಾಲ್, ಕಬಡ್ಡಿ, ಟೆನಿಕ್ವಾಯಿಟ್ ಪ್ರಥಮ, ಶಟಲ್ ಪ್ರಥಮ.

**ಬಾಲಕಿಯರ ವೈಯಕ್ತಿಕ ವಿಭಾಗ:** ಯಶೋಧ ಮೆಣಸಗಿ 400ಮೀ ಓಟ, 800ಮೀ ಓಟ ಪ್ರಥಮ, ಪವಿತ್ರ ರಘುನಾಥನಹಳ್ಳಿ ಗುಂಡು ಎಸೆತ, ಚಕ್ರ ಎಸೆತ, ಭಲ್ಲೆ ಎಸೆತ ಪ್ರಥಮ, ಭುವನೇಶ್ವರಿ ತಳವಾರ ಸರಪಳಿ ಗುಂಡು ಎಸೆತ ದ್ವಿತೀಯ.

**ಬಾಲಕಿಯರ ಗುಂಪು ಆಟಗಳ ವಿಭಾಗ:** ವಾಲಿಬಾಲ್, ಟೆನಿಕ್ವಾಯಿಟ್, ಶಟಲ್ ಪ್ರಥಮ, ಕಬಡ್ಡಿ ದ್ವಿತೀಯ

ಬಾಲಕರ ವಿಭಾಗದಿಂದ ಮೂರು ವಯಕ್ತಿಕ ಕ್ರೀಡೆಯಲ್ಲಿ ಪ್ರಥಮ ಸ್ಥಾನ ಪಡೆದ ವಿಜಯ ಬಾರಕೇರ 'ವೀರ ಕೇಸರಿ' ಪ್ರಶಸ್ತಿ ಪಡೆದಿದ್ದರೆ, ಬಾಲಕಿಯರ ವಿಭಾಗದಿಂದ ಮೂರು ವಯಕ್ತಿಕ ಕ್ರೀಡೆಯಲ್ಲಿ ಪ್ರಥಮ ಸ್ಥಾನ ಪಡೆದ ಪವಿತ್ರ ರಘುನಾಥನಹಳ್ಳಿ 'ವೀರಾಗ್ರಣಿ'ಗೆ ಭಾಜನರಾಗಿದ್ದಾರೆ.

ಕ್ರೀಡಾಕೂಟದಲ್ಲಿ ಭಾಗವಹಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ಕಾಲೇಜಿನ ಕ್ರೀಡಾಪಟುಗಳಿಗೆ ಹಾಗೂ ದೈ.ಶಿ.ಉಪನ್ಯಾಸಕರಿಗೆ ಕುಮಾರ ಕಲ್ಮಠ ನಾಡೋಜ ಜಗದ್ಗುರು ಅನ್ನದಾನೀಶ್ವರಸ್ವಾಮೀಜಿ, ಉತ್ತರಾಧಿಕಾರಿ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಕಾಲೇಜು ಕಮಿಟಿ ಅಧ್ಯಕ್ಷ ಕೆ.ವಿ ಹಂಚಿನಾಳ, ಉಪಾಧ್ಯಕ್ಷ ಎಸ್.ಬಿ ಹಿರೇಮಠ, ಸದಸ್ಯರಾದ ಕೆ.ಎ ದೇಸಾಯಿ, ಬಸವರಾಜ ಬನ್ನಿಕೊಪ್ಪ, ಕೆ.ಎಸ್ ರೋಣದ, ಬಿ.ಎಫ್ ಈಟಿ, ಶರಣಯ್ಯ ಕಾಗನೂರಮಠ, ಆಡಳಿತಾಧಿಕಾರಿ ಡಾ. ಬಿ.ಜಿ ಜವಳಿ, ಪ್ರಾಚಾರ್ಯ ಶಿವರಾಜಸ್ವಾಮಿ ಎಸ್ ಹಾಗೂ ಕಾಲೇಜಿನ ಸರ್ವ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

'ರಾಷ್ಟ್ರೀಯ ಕ್ರೀಡಾ ದಿನಾಚರಣೆ' ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ.ಪಾಟೀಲ

# ದೇಶ ಕಂಡ ಶ್ರೇಷ್ಠ ಕ್ರೀಡಾಪಟು ಮೇಜರ್ ಧ್ಯಾನಚಂದ

■ವಿಜಯಸಾಕ್ಷಿ ಸುದ್ದಿ, ಗದಗ

ದೇಶ ಕಂಡ ಶ್ರೇಷ್ಠ ಹಾಕಿ ಕ್ರೀಡಾಪಟು ಮೇಜರ್ ಧ್ಯಾನಚಂದ್. ಭಾರತೀಯ ಕ್ರೀಡಾ ಕ್ಷೇತ್ರದ ಮೊಟ್ಟ ಮೊದಲ ಸುಪರ್ ಸ್ಟಾರ್ ಹಾಕಿ ಮಾಂತ್ರಿಕರಾಗಿದ್ದು, ಅನೇಕ ಕ್ರೀಡಾಪಟುಗಳಿಗೆ ಸ್ಫೂರ್ತಿಯಾಗಿದ್ದಾರೆ. ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ ಪಾಟೀಲ ಅಭಿಪ್ರಾಯಪಟ್ಟರು.

ನಗರದ ಕೆ.ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಮೇಜರ್ ಧ್ಯಾನಚಂದ ಅವರ ಜನ್ಮದಿನಾಚರಣೆ ಹಿನ್ನೆಲೆಯಲ್ಲಿ 'ರಾಷ್ಟ್ರೀಯ ಕ್ರೀಡಾ ದಿನಾಚರಣೆ' ನಿಮಿತ್ತ ಆಯೋಜಿಸಲಾದ ಕ್ರೀಡಾಕೂಟವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು.

ಬ್ರಿಟಿಷ್ ಇಂಡಿಯನ್ ಆರ್ಮಿಯಲ್ಲಿ ಶಿಸ್ತಿನ ಸಿಪಾಯಿಯಾಗಿದ್ದ ಧ್ಯಾನಚಂದ ಅವರು ಹಗಲಲ್ಲಿ ಕರ್ತವ್ಯ ನಿರ್ವಹಿಸಿ, ರಾತ್ರಿ ಹಾಕಿ ಕ್ರೀಡೆಯ ಅಭ್ಯಾಸದಲ್ಲಿ ನಿರತರಾಗುತ್ತಿದ್ದರು. ಅನೇಕ ಬಾರಿ ಅವರು ದೇಶಕ್ಕೆ ಒಲಂಪಿಕ್ ಸ್ಪರ್ಧೆಯಲ್ಲಿ ಸ್ವರ್ಣ ಪದಕ ಗೆದ್ದು ತರುವ ಮೂಲಕ ಹಾಕಿ ಕ್ರೀಡೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿದವರು. ಅವರ ನೆನಪಿಗಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಆಚರಿಸಲಾಗುತ್ತಿದೆ ಎಂದರು.



> ಮೇಜರ್ ಧ್ಯಾನಚಂದ ಅವರ ಹಾಕಿ ಕ್ರೀಡೆ ವೀಕ್ಷಣೆಗಾಗಿ ದೇಶ-ವಿದೇಶಿಗಳ ಪ್ರವಾಸಿಗರು ಆಗಮಿಸುತ್ತಿದ್ದರು. ಆದರೆ ಸ್ವತಃ ಧ್ಯಾನಚಂದ ಅವರು ಗದಗಿಗೆ ಆಗಮಿಸಿ ಇಲ್ಲಿನ ದೇಶೀ ಕ್ರೀಡೆ ವೀಕ್ಷಿಸಿದ್ದಾರೆ. ಗದಗ ಜಿಲ್ಲೆಯಲ್ಲಿ ನೂತನವಾಗಿ ಹಾಕಿ ಟರ್ಫ್ ಕ್ರೀಡಾಂಗಣ 9 ಕೋಟಿ ರೂ. ವೆಚ್ಚದಲ್ಲಿ ತಲೆ ಎತ್ತಿ ನಿಂತಿದೆ. ಸೆಪ್ಟೆಂಬರ್ 3ರಂದು ಹಾಕಿ ಟರ್ಫ್ ಕ್ರೀಡಾಂಗಣ ಲೋಕಾರ್ಪಣೆಗೊಳ್ಳಲಿದೆ. ಗದಗ ನಗರದಲ್ಲಿರುವ ಹಾಕಿ ಕ್ರೀಡಾಂಗಣದಲ್ಲಿ ಕ್ರೀಡಾಭ್ಯಾಸ ಮಾಡಿದ ಹಲವರು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಸಾಧನೆಗೈದಿದ್ದಾರೆ. ಕ್ರೀಡಾ ಕ್ಷೇತ್ರದಲ್ಲಿ ಜಿಲ್ಲೆಯ ಯುವಕರು ತಮ್ಮದೇ ಆದ ಹೆಜ್ಜೆ ಗುರುತು ಮೂಡಿಸುವ ಮೂಲಕ ಜಿಲ್ಲೆಗೆ ಹೆಮ್ಮೆ ತಂದಿದ್ದಾರೆ.
>
> – ಎಚ್.ಕೆ ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯ ಯುವ ಸಮುದಾಯಕ್ಕೆ ಕ್ರೀಡಾ ಕ್ಷೇತ್ರದಲ್ಲಿ ಸಾಧನೆಗೈಯಲು ಪೂರಕ ವಾತಾವರಣವಿದೆ. ಉತ್ತಮ ಕ್ರೀಡಾಂಗಣ ಜೊತೆಗೆ ಹಾಕಿ, ಬಾಸ್ಕೆಟ್ ಬಾಲ್, ಈಜುಕೊಳ, ಒಳಾಂಗಣ ಕ್ರೀಡಾಂಗಣ ಸೇರಿದಂತೆ ಗುಣಮಟ್ಟದ ಸೌಲಭ್ಯಗಳನ್ನು ಸಚಿವರಾದ ಎಚ್.ಕೆ ಪಾಟೀಲರು ಒದಗಿಸಿದ್ದಾರೆ. ಕ್ರೀಡಾ ಕ್ಷೇತ್ರದಲ್ಲಿ ಗದಗ ಜಿಲ್ಲೆಯಲ್ಲಿ ಯುವಕರು ಇನ್ನೂ ಹೆಚ್ಚು ಸಾಧನೆ ಮಾಡಲು ಸ್ಫೂರ್ತಿದಾಯಕವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಸಚಿವ ಎಚ್.ಕೆ ಪಾಟೀಲರು ಕ್ರೀಡಾಪಟುಗಳಿಗೆ ಕ್ರೀಡಾ ಕಿಟ್‌ಗಳನ್ನು ವಿತರಿಸಿದರು. ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಸಿದ್ದು ಪಾಟೀಲ, ದಶರಥ ನಾಡಿಗೇರ, ದೇವಪ್ಪ ಕೊಂಡಿಕೊಪ್ಪ, ಎಸ್.ಡಿ ಕೊಳ್ಳಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕಾ ಕ್ರೀಡಾಪಟುಗಳು ಇದ್ದರು.

ಕಾರ್ಯಕ್ರಮಕ್ಕೂ ಮುನ್ನ ಪಂ.ಪುಟ್ಟರಾಜ ಗವಾಯಿಗಳ ಸಂಗೀತ ಪಾಠಶಾಲೆಯ ವೆಂಕಟೇಶ ಹಾಗೂ ಸಂಗಡಿಗರು ನಾಡಗೀತೆ ಹಾಡಿದರು. ಬಾಹುಬಲಿ ಜೈನರ್ ಕಾರ್ಯಕ್ರಮ ನಿರೂಪಿಸಿದರು.

# ಸಮರ್ಪಕ ನೀರು ಪೂರೈಕೆಗೆ ಆಗ್ರಹಿಸಿ ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ 15 ದಿನಗಳಾದರೂ ಕುಡಿಯುವ ನೀರು ಪೂರೈಕೆಯಾಗದಿರುವುದನ್ನು ಖಂಡಿಸಿ ಮಂಗಳವಾರ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ಪುರಸಭೆಯೆದುರು ಪ್ರತಿಭಟನೆ ನಡೆಸಿದರು.

ಪುರಸಭೆಯ ನಿರ್ಲಕ್ಷ್ಯದಿಂದ ನೀರು ಪೂರೈಕೆಯಲ್ಲಿ ಅಸ್ತವ್ಯಸ್ತವಾಗುತ್ತಿದೆ ಎಂದು ಆರೋಪಿಸಿದ ಅವರು, ನೀರು ಪೂರೈಕೆ ಬಗ್ಗೆ ಪುರಸಭೆಯವರು ಇಲ್ಲಸಲ್ಲದ ಕಾರಣ ಹೇಳುತ್ತಿದ್ದಾರೆ. ಈ ಸಮಸ್ಯೆಗೆ ಹೊಣೆ ಯಾರು? ಕ್ಷೇತ್ರದ ಶಾಸಕರು, ಅಧಿಕಾರಿಗಳು ಈ ನಿಟ್ಟಿನಲ್ಲಿ ಗಮನ ಹರಿಸಬೇಕು. ಸಮರ್ಪಕ ನೀರು ಪೂರೈಕೆಯಾಗದಿದ್ದರೆ ತೀವ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ಪುರಸಭೆಯ ಮುಕ್ತಿವಾಹಿನಿ ವಾಹನವೂ ಸಂಪೂರ್ಣ ಹಾಳಾಗಿದೆ. ಬೇರೆ ಊರಿನಿಂದ ಶವ ಸಂಸ್ಕಾರಕ್ಕೆ ವಾಹನ ತರುವ ಪರಿಸ್ಥಿತಿ ಬಂದಿದೆ. ಚರಂಡಿ ಸ್ವಚ್ಛತೆ, ರಸ್ತೆ ಕಾಮಗಾರಿ ಅವ್ಯವ್ಯವಸ್ಥೆ ಸೇರಿ ಅನೇಕ ತೊಂದರೆಗಳು ಪಟ್ಟಣದಲ್ಲಿವೆ. ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಆಗ್ರಹಿಸಿದರು.

ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ, ತುಂಗಭದ್ರಾ ನದಿಯಿಂದ ಪಟ್ಟಣಕ್ಕೆ ನೀರು ಪೂರೈಕೆಯಾಗುವ ಪೈಪ್‌ಲೈನ್ 20 ವರ್ಷಗಳಷ್ಟು ಹಳೆಯದಾಗಿದ್ದು, ನಿತ್ಯ ಒಂದಿಲ್ಲೊಂದು ಕಡೆ ಪೈಪ್ ಒಡೆಯುತ್ತಿದೆ. ಸೋರಿಕೆಯಿಂದ ಸಾಕಷ್ಟು ನೀರು ಪೋಲಾಗುತ್ತಿದೆ. ಆದಾಗ್ಯೂ ನೀರಿನ ಸಮಸ್ಯೆ ತಲೆದೋರದಂತೆ ಹಗಲು-ರಾತ್ರಿಯೆನ್ನದೆ ದುರಸ್ಥಿ, ನಿರ್ವಹಣೆ ಕಾರ್ಯ ಮಾಡಲಾಗುತ್ತಿದೆ. ಹೊಸ ಪೈಪ್‌ಲೈನ್ ಅಳವಡಿಕೆಗೆ ಕ್ರಿಯಾಯೋಜನೆ ಸಿದ್ಧಪಡಿಸಿ ಕೆಯುಡಬ್ಲೂಎಸ್‌ಗೆ ಕಳುಹಿಸಲಾಗಿದೆ. ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದರು. ಪುರಸಭೆ ಸದಸ್ಯ ಬಸವರಾಜ ಓದುನವರ ಇದ್ದರು.

ಕರವೇ ಸಂಘಟನಾ ಕಾರ್ಯದರ್ಶಿ ಬಸವರಾಜ ಹೊಗೆಸೊಪ್ಪಿನ, ತಾಲೂಕಾಧ್ಯಕ್ಷ ಲೋಕೇಶ ಸುತಾರ, ಪ್ರಕಾಶ ಕೊಂಚಿಗೇರಿಮಠ, ಪ್ರವೀಣ್ ಗಾಣಿಗೇರ, ಆಷ್ಪಾಕ್ ಬಾಗೋಡಿ, ಪ್ರವೀಣ ಗೌರಿ, ಬಸವರಾಜ ಮಡಿವಾಳ, ಶಂಕರಗೌಡ ಪಾಟೀಲ, ಹನುಮಂತಪ್ಪ ದತ್ತರಗಿ, ವಾಸು ಗೋಸಾವಿ, ಮೈನು ಮನಿಯಾರ್, ದಾವೂದ್ ಕಾರಡಗಿ, ಬಸವರಾಜ ಮಲ್ಲೂರು, ಪ್ರಶಾಂತ ಹಂಜಗಿ, ಅರುಣ ಮೆಕ್ಕಿ, ಗಣೇಶ ಮೆರವಾಡಿ ಮುಂತಾದವರಿದ್ದರು.

# ಕಾಲಕಾಲಕ್ಕೆ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ನಮ್ಮ ಬದುಕಿಗೆ ಕಣ್ಣುಗಳು ಮುಖ್ಯವಾಗಿದ್ದು, ಕಾಲ ಕಾಲಕ್ಕೆ ಕಣ್ಣುಗಳನ್ನು ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಗದಗ ಜಿಲ್ಲಾ ನಿರ್ದೇಶಕ ಯೋಗೇಶ ಎ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಶಿರಹಟ್ಟಿ, ಪ್ರಗತಿಬಂಧು ಸ್ವಸಹಾಯ ಸಂಘಗಳ ಒಕ್ಕೂಟ ಮತ್ತು ಹುಬ್ಬಳ್ಳಿಯ ಎಂ.ಎಂ ಜೋಶಿ ನೇತ್ರವಿಜ್ಞಾನ ಸಂಸ್ಥೆಗಳ ಸಹಯೋಗದಲ್ಲಿ ಏರ್ಪಡಿಸಿದ್ದ ಆರೋಗ್ಯ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘವು ಸಮುದಾಯದ ಆರೋಗ್ಯದ ಜೊತೆಯಲ್ಲಿ ಸ್ವಸಹಾಯ ಸಂಘಗಳ ಮೂಲಕ ಕುಟುಂಬಗಳು ಆರ್ಥಿಕವಾಗಿ ಸದೃಢರಾಗಲು ಹಲವಾರು ಯೋಜನೆಗಳನ್ನು ರೂಪಿಸಿ ಜಾರಿಗೆ ತಂದಿದೆ. ಸಮುದಾಯಗಳು ಆರ್ಥಿಕವಾಗಿ ಸದೃಢರಾಗುವುದರ ಜೊತೆಗೆ ಆರೋಗ್ಯದ ಕಡೆ ಹೆಚ್ಚು ಗಮನ ನೀಡಬೇಕು. ನಮ್ಮ ಮನೆಯ ಸುತ್ತ ಮುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳಬೇಕು. ಉತ್ತಮ ಆರೋಗ್ಯ ಹೊಂದುವುದರಿಂದ ಸಮುದಾಯ ಆರೋಗ್ಯವಾಗಿರಲು ಸಾಧ್ಯವಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ಪ ಪಂ ಸದಸ್ಯ ಎಸ್.ಸಿ ಬಡ್ನಿ ವಹಿಸಿದ್ದರು. ಎಂ.ಡಿ ಬಟ್ಟೂರ, ಹರ್ಷಲತಾ ದೇಶಪಾಂಡೆ, ಮುಳಗುಂದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯ ಡಾ.ಪ್ರವೀಣ ತುಪ್ಪದ, ಶಿರಹಟ್ಟಿ ತಾಲೂಕಾ ಯೋಜನಾಧಿಕಾರಿ ವಿನೋದಕುಮಾರ ಎ, ಪ್ರಕಾಶ ಮದ್ದಿನ, ಸುಮಾ ಲಕ್ಷ್ಮೇಶ್ವರ, ಮೇಲ್ವಿಚಾರಕಿ ರೇಣುಕಾ, ಮಾಹಾದೇವಿ ನೀಲಗುಂದ, ಶೈಲಾ ಬಳ್ಳಾರಿ, ಕಸ್ತೂರಿ ಪಾಟೀಲ, ದಾವಲಬಿ ಕಿಲ್ಲೇದಾರ, ಲಲಿತಾ ಭೋವಿ, ಮಾಹಾದೇವಿ, ಹೀನಾ ಗಾಡಿ, ಯಲ್ಲಪ್ಪ ಮೂಲಿಮನಿ, ರಮೇಶ.ಎಂ.ಸಿ ಉಪಸ್ಥಿತರಿದ್ದರು.

# ಯಜ್ಞೋಪವೀತ ಧಾರಣೆಯಿಂದ ಮನೋಬಲ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಯಜ್ಞೋಪವೀತ ಧಾರಣೆಯಿಂದ ಮನುಷ್ಯನಿಗೆ ಮನೋಬಲ ದೊರಕುತ್ತದೆ. ಯಜ್ಞೋಪವೀತವನ್ನು ಉಪವೀತ, ಯಜ್ಞಸೂತ್ರ, ವೃತಬಂಧ, ಬಲಬಂಧ, ಮೋನೀಬಂಧ ಹಾಗೂ ಬ್ರಹ್ಮಸೂತ್ರ ಇತ್ಯಾದಿ ಹೆಸರುಗಳಿಂದ ಕರೆಯುತ್ತಿದ್ದು, ಆಡು ಭಾಷೆಯಲ್ಲಿ ಇದಕ್ಕೆ ಜನಿವಾರವೆಂದು ಕರೆಯುತ್ತಾರೆ ಎಂದು ಶ್ರೀ ದತ್ತಾತ್ರೇಯ ದೇವಸ್ಥಾನದ ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿ ಹೇಳಿದರು.



ಮಂಗಳವಾರ ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಶ್ರಾವಣಿ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಏರ್ಪಡಿಸಿದ್ದ ಯಜ್ಞೋಪವೀತ ಧಾರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯಾರಿಗೆ ಉಪನಯನ ವಾಗಿರುತ್ತದೆಯೋ ಅವರು ಕಡ್ಡಾಯವಾಗಿ ಯಜ್ಞೋಪವೀತವನ್ನು ತಮ್ಮ ಜೀವನದುದ್ದಕ್ಕೂ ಧಾರಣ ಮಾಡಲೇಬೇಕು. ಮನುಷ್ಯ ಹುಟ್ಟಿನಿಂದ ಸಾಯುವವರೆಗೂ ನಡೆಯುವ ಶೋಡೋಪಚಾರ ಸಂಸ್ಕಾರಗಳಲ್ಲಿ ಯಜ್ಞೋಪವೀತ ಧಾರಣೆಯೂ ಒಂದು ಸಂಸ್ಕಾರವಾಗಿದೆ ಎಂದು ಹೇಳಿದರು.

ಯಜ್ಞೋಪವೀತವನ್ನು ಧರಿಸಿದ ವ್ಯಕ್ತಿ ನಿತ್ಯವೂ ತ್ರಿಕಾಲ ಸಂಧ್ಯಾ ಮಾಡಬೇಕು. ಗಾಯತ್ರಿ ಮಂತ್ರದ ಪಠಣ ಮಾಡಬೇಕು. ಜನಿವಾರ ತುಂಡಾದರೆ ತಕ್ಷಣವೇ ಅದನ್ನು ಬದಲಿಸಬೇಕು.

ಅಶೌಚ ಕರ್ಮಾದಿ ಕಾರ್ಯಗಳಿಂದ ಮೈಲಿಗೆಯುಂಟಾದರೆ ಹಳೆಯದನ್ನು ತೆಗೆದುಹಾಕಿ, ಹೊಸ ಜನಿವಾರವನ್ನು ಧರಿಸಬೇಕಾದುದು ಯಜ್ಞೋಪವೀತಧಾರಿಯ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅರುಣಭಟ್ಟ ಗ್ರಾಮಪುರೋಹಿತ, ನಾಗೇಶಭಟ್ಟ ಗ್ರಾಮಪುರೋಹಿತ, ಅರುಣ ಕುಲಕರ್ಣಿ(ಕುರಗಡ್ಡಿ), ಆನಂದ ಕುಲಕರ್ಣಿ, ಕೋಟುಮಚಗಿಯ ಶ್ರೀಧರ ಕುಲಕರ್ಣಿ, ಅಜಿತ ಕುಲಕರ್ಣಿ, ನಿವೃತ್ತ ಉಪನ್ಯಾಸಕ ಎಸ್.ಎಚ್ ಕುಲಕರ್ಣಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ, ರಾಮು ಸದರಜೋಷಿ, ಪವನ ಗ್ರಾಮಪುರೋಹಿತ, ಕಾರ್ತಿಕ ಕುಲಕರ್ಣಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಕ್ರೀಡೆಯಿಂದ ಜೀವನ ಪಾವನ: ಎಲ್.ಎಸ್ ಪಾಟೀಲ

■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆಯಿಂದ ಜೀವನ ಪಾವನವಾಗುತ್ತದೆ. ಪ್ರತಿಯೊಬ್ಬರೂ ಕ್ರೀಡೆಯಲ್ಲಿ ಭಾಗವಹಿಸಿ ಸದೃಢರಾಗಬೇಕು. ಆಗ ಮಾತ್ರ ಆರೋಗ್ಯ ಸುಧಾರಿಸುತ್ತದೆ, ಅವರ ಮನಸ್ಸು ಪ್ರಫುಲ್ಲವಾಗುತ್ತದೆ. ಆರೋಗ್ಯವಾದ ದೇಹದಲ್ಲಿ ಆರೋಗ್ಯವಾದ ಮನಸ್ಸಿರುತ್ತದೆ ಎಂದು ಪ್ರಾ. ಎಲ್.ಎಸ್ ಪಾಟೀಲ ಹೇಳಿದರು.



ಅವರು ನಗರದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ ಮತ್ತು ಸ್ನಾತಕೋತ್ತರ ಕೇಂದ್ರದಲ್ಲಿ 'ರಾಷ್ಟ್ರೀಯ ಕ್ರೀಡಾ ದಿನಾಚರಣೆ' ಕಾರ್ಯಕ್ರಮದಲ್ಲಿ ಮಾತನಾಡಿದರು.

ದೈಹಿಕ ಶಿಕ್ಷಕ ಶಶಿಕಾಂತ ಕೊರ್ಲಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರೊ. ಎಸ್.ಎಂ ಮಡಿವಾಳರ, ಪ್ರೊ. ಎಸ್.ಜಿ ಉಳಿಗೇರ, ಪ್ರೊ. ಬಿ.ಸಿ ಜೋಗಿನ, ಪ್ರೊ. ಎಂ.ಡಿ ಮಾದರ, ಪ್ರೊ. ಜಿ.ಎಫ್ ಕಾಯಕದ, ಪ್ರೊ. ಎನ್.ಆರ್ ಗೋಟೂರ, ಪ್ರೊ. ಎಂ.ವಿ ಸವದತ್ತಿ ಪ್ರೊ. ಎನ್.ವಿ ರಾಠೋಡ ಉಪಸ್ಥಿತರಿದ್ದರು.

# ಕೊನೆಯವರೆಗೂ ನಿಮ್ಮ ಸೇವೆಯಲ್ಲಿರುತ್ತೇನೆ: ಡಾ. ಜಿ.ಕೆ ಕಾಳೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ 45 ವರ್ಷಗಳಿಂದ ನರೇಗಲ್ಲ ಪಟ್ಟಣದಲ್ಲಿ ನಾನು ವೈದ್ಯಕೀಯ ವೃತ್ತಿಯನ್ನು ಮಾಡುತ್ತಿದ್ದೇನೆ. ರೋಗಿಗಳೇ ನನ್ನ ಪಾಲಿನ ದೇವರು. ಅವರ ಸೇವೆಯೆ ನನಗೆ ದೇವರ ಪೂಜೆ. ಜನತಾ ಜನಾರ್ಧನನ ಸೇವೆಯಲ್ಲಿಯೆ ನನ್ನ ಆಯುಷ್ಯವನ್ನು ಕಳೆಯುತ್ತೇನೆ.

ನನ್ನ ನೋವು, ನಲಿವುಗಳಿಗೆಲ್ಲ ನೀವು ಮನೆಯವರಂತೆಯೆ ಸ್ಪಂದಿಸಿದ್ದೀರಿ. ನನ್ನ ದೇಹದಲ್ಲಿ ಶಕ್ತಿ ಇರುವವರೆಗೂ ನಾನು ನಿಮ್ಮ ಸೇವೆಯಲ್ಲಿರುತ್ತೇನೆ ಎಂದು ಪಟ್ಟಣದ ಖ್ಯಾತ ವೈದ್ಯ ಡಾ. ಜಿ.ಕೆ ಕಾಳೆ ಹೇಳಿದರು.

ಪಟ್ಟಣದ ಪಾಯಪ್ಪಗೌಡ್ರ ಓಣಿಯಲ್ಲಿ ಪ್ರತಿಷ್ಠಾಪಿಸಲಾದ ಶ್ರೀ ಕಟ್ಟಿಬಸವೇಶ್ವರ ಮೂರ್ತಿಯ ಪ್ರತಿಷ್ಠಾಪನಾ ಸಮಾರಂಭದಲ್ಲಿ ಸಂಘದವರು ನೀಡಿದ ಸತ್ಕಾರವನ್ನು ಸ್ವೀಕರಿಸಿ ಅವರು ಮಾತನಾಡಿದರು.



ಈ ಸಂದರ್ಭದಲ್ಲಿ ಓಣಿಯ ಹಿರಿಯರಾದ ಬಸನಗೌಡ ಬಿಷ್ಟನಗೌಡ್ರ, ಪ ಪಂ ಮಾಜಿ ಅಧ್ಯಕ್ಷ ಕಲ್ಮೇಶ ತೊಂಡಿಹಾಳ, ಶರಣಪ್ಪ ಕಲಾಲಬಂಡಿ, ವೀರಣ್ಣ ಗುಜಮಾಗಡಿ, ಮುತ್ತಣ್ಣ ಮಾವಿನಕಾಯಿ, ಬಸವರಾಜ ಮಾಳವಾಡ, ಶ್ರೀಕಾಂತ ಹೊಸಮನಿ, ಪರಪ್ಪ ಬೆಡಗಲ, ಅಶೋಕ ಬಾರಕೇರ, ಪ್ರಕಾಶ ಕಳಕೊಣ್ಣವರ, ಸೋಮಶೇಖರ ಸಂಗನಾಳಮಠ ಮುಂತಾದವರಿದ್ದರು.

ಕಟ್ಟಿ ಬಸವೇಶ್ವರ ಭಜನಾ ಸಂಘದವರು ವಿಶೇಷ ಭಜನೆಯ ಮೂಲಕ ಕಾರ್ಯಕ್ರಮಕ್ಕೆ ಮೆರುಗು ತಂದರು.


ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳವರು ದಿವ್ಯ ಸಾನ್ನಿಧ್ಯ ವಹಿಸಿದ್ದರು. ಶಿಕ್ಷಕ ಎಂ.ಕೆ ಬೇವಿನಕಟ್ಟಿ ನಿರೂಪಿದರು. ಉಮೇಶ ಸಂಗನಾಳಮಠ ಸ್ವಾಗತಿಸಿದರು. ಪ್ರಕಾಶ ಪಾಯಪ್ಪಗೌಡರ ವಂದಿಸಿದರು.

# ಸೆ.4ರಂದು ಶಾಸಕ ಜಿ.ಎಸ್ ಪಾಟೀಲರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಅಂಜುಮನ್ ಇಸ್ಲಾಂ ಕಮಿಟಿ ರೋಣ ಹಾಗೂ ಮುಸ್ಲಿಂ ಸಮುದಾಯದ ವತಿಯಿಂದ ರೋಣ ಮತಕ್ಷೇತ್ರಕ್ಕೆ ನೂತನವಾಗಿ ಆಯ್ಕೆಗೊಂಡ ಶಾಸಕ ಜಿ.ಎಸ್ ಪಾಟೀಲ ಹಾಗೂ ವಿ ಪ ಸದಸ್ಯರು, ಸರಕಾರದ ಮುಖ್ಯ ಸಚೇತಕರಾದ ಸಲೀಂ ಅಹ್ಮದರವರಿಗೆ ಸೆ.4ರಂದು ಪಟ್ಟಣದ ಅಂಜುಮನ್ ಶಾದಿ ಮಹಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಸೆ.4ರಂದು ಬೆಳಿಗ್ಗೆ 11ಕ್ಕೆ ಜರುಗುವ ಸಮಾರಂಭದ ಸಾನ್ನಿಧ್ಯವನ್ನು ಗುಲಗಂಜಿ ಮಠದ ಗುರುಪಾದ ಶ್ರೀಗಳು, ನೇತೃತ್ವವನ್ನು ದರ್ಗಾದ ಹಜರತ್ ಸೈಯದ ಸುಲೇಮಾನ ಶಾವಲಿ ಅಜ್ಜನವರು, ಅಧ್ಯಕ್ಷತೆಯನ್ನು ಅಂಜುಮನ್ ಕಮಿಟಿ ಅಧ್ಯಕ್ಷ ಬಾವಾಸಾಬ ಬೆಟಗೇರಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಕೆಸಿಸಿ ಬ್ಯಾಂಕ್ ನಿರ್ದೇಶಕ ಐ.ಎಸ್ ಪಾಟೀಲ, ಪುರಸಭೆಯ ಉಪಾಧ್ಯಕ್ಷ ಮಿಥುನ್ ಪಾಟೀಲ ಸೇರಿದಂತೆ ಸಮಾಜದ ಮುಖಂಡರು, ಪುರಸಭೆಯ ಸದಸ್ಯರು, ಮಸೀದಿಗಳ ಹಿರಿಯರು, ರೋಣ, ನರೆಗಲ್ಲ, ಗಜೇಂದ್ರಗಡ ಪಟ್ಟಣಗಳ ಹಾಗೂ ಗ್ರಾಮಗಳ ಅಂಜುಮನ್ ಕಮಿಟಿ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿರುವರೆಂದು ಪಟ್ಟಣದ ಅಂಜುಮನ್ ಸಂಸ್ಥೆಯ ಪ್ರಕಟಣೆ ತಿಳಿಸಿದೆ.



# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ನರಗುಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಖಾಲಿ ಇರುವ ಗಣಿತಶಾಸ್ತ್ರ, ಗಣಕಯಂತ್ರ ವಿಜ್ಞಾನ ಇಂಜಿನಿಯರಿಂಗ್, ಇಲೆಕ್ಟ್ರಾನಿಕ್ಸ್ , ಅರ್ಟಿಫಿಷಿಯಲ್ ಇಂಟಲಿಜೆನ್ಸ್ ಮಾಹಿತಿ ತಂತ್ರಜ್ಞಾನ ವಿಷಯಗಳನ್ನು ಬೋಧಿಸಲು ಅರೆಕಾಲಿಕ ಉಪನ್ಯಾಸಕರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಖುದ್ದಾಗಿ ಸಂಸ್ಥೆಗೆ ಅಥವಾ ದೂರವಾಣಿ ಸಂಖ್ಯೆ 9731715913/ 7204038613/ 08377-200143 ಮುಖಾಂತರ ಸಂಪರ್ಕಿಸಬಹುದಾಗಿದೆ. ಅರ್ಜಿಯನ್ನು ನೇರವಾಗಿ ಸಂಸ್ಥೆಗೆ/ ಸಂಸ್ಥೆಯ ಇಮೇಲ್ ಐಡಿ/ ಅಂಚೆ ಮುಖಾಂತರ ಸೆಪ್ಟೆಂಬರ್ 5 ರೊಳಗೆ ನರಗುಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಈ ವಿಳಾಸಕ್ಕೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ನರಗುಂದ ದೂರವಾಣಿ ಸಂಖ್ಯೆ : 08377-200143 ಸಂಪರ್ಕಿಸಬಹುದಾಗಿದೆ.

# ಬಯೋಮೆಟ್ರಿಕ್ ಆಥೆಂಟಿಕೇಷನ್, ಅರ್ಜಿಗಳ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಗದಗ

2022-23ನೇ ಸಾಲಿನಲ್ಲಿ ರಾಷ್ಟ್ರೀಯ ವಿದ್ಯಾರ್ಥಿ ವೇತನಕ್ಕೆ ಸಂಬಂಧಸಿದಂತೆ ಬಯೋಮೆಟ್ರಿಕ್ ಆಥೆಂಟಿಕೇಷನ್ ಹಾಗೂ ಅರ್ಜಿಗಳನ್ನು ಪರಿಶೀಲನೆ ಮಾಡಲು ಕೆಳಕಂಡಂತೆ ದಿನಾಂಕವನ್ನು ನಿಗದಿಪಡಿಸಲಾಗಿದೆ. ವಿದ್ಯಾರ್ಥಿಗಳ ಬಯೋಮೆಟ್ರಿಕ್ ಮಾಡಿಸಲು ಆಗಸ್ಟ್ 31ಕೊನೆಯ ದಿನವಾಗಿದ್ದು, ಶಾಲೆ/ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಗಳ ಅರ್ಜಿ ಪರಿಶೀಲನೆಗೆ ಸೆಪ್ಟೆಂಬರ್ 6 ಕೊನೆಯ ದಿನವಾಗಿದೆ.

ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಬಯೋಮೆಟ್ರಿಕ್ ಆಥೆಂಟಿಕೇಷನ್ ಕಡ್ಡಾಯವಾಗಿರುತ್ತದೆ. ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಎಲ್ಲಾ ಶಾಲಾ/ ಕಾಲೇಜುಗಳ ಮುಖ್ಯಸ್ಥರ ಹಾಗೂ ಶಾಲಾ/ಕಾಲೇಜಿನಲ್ಲಿ ನೇಮಕವಾಗಿರುವ ಇನ್‌ಸ್ಟಿಟ್ಯೂಟ್ ನೋಡಲ್ ಅಧಿಕಾರಿಗಳವರ ಬಯೋಮೆಟ್ರಿಕ್ ಆಥೆಂಟಿಕೇಷನ್ ಮತ್ತು ಎಲ್ಲಾ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಬಯೋಮೆಟ್ರಿಕ್ ಆಥೆಂಟಿಕೇಷನ್ ಹಾಗೂ ಅರ್ಜಿಗಳ ಪರಿಶೀಲನೆ ಮಾಡಿಸಲು ನಿಗದಿತ ದಿನಾಂಕದೊಳಗೆ ಪೂರ್ಣಗೊಳಿಸಲು ಜಿಲ್ಲಾ ಹಾಗೂ ತಾಲೂಕೂ ಮಾಹಿತಿಕೇಂದ್ರಗಳ ದತ್ತಾಂಶ ನಿರ್ವಾಹಕರ ಮೂಲಕ ಕೈಗೊಳ್ಳಲು ತಿಳಿಸಿದೆ. ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಬಯೋಮೆಟ್ರಿಕ್ ಆಥೆಂಟಿಕೆಷನ್ ಬಾಕಿ ಉಳಿದಲ್ಲಿ, ಅಂತಹ ಶಾಲಾ/ಕಾಲೇಜುಗಳ ಮುಖ್ಯಸ್ಥರು ಮತ್ತು ನೋಡಲ್ ಅಧಿಕಾರಿಯವರು ಇದಕ್ಕೆ ನೇರ ಹೋಣೆಗಾರರಾಗಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಕೇಂದ್ರ ಗದಗ-9901132191, ಶಿರಹಟ್ಟಿ-9591705863, ಮುಂಡರಗಿ-9916689778, ನರಗುಂದ-9901501170, ರೋಣ-9964490088 ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka